ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

06 ಫೆಬ್ರವರಿ 2026 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 323 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629





ವಡೋದರದಲ್ಲಿ ಗುರುವಾರ ನಡೆದ ಮಹಿಳಾ ಪ್ರೀಮಿಯರ್ ಫೈನಲ್ ಪಂದ್ಯದಲ್ಲಿ ಆರ್‌ಸಿಬಿ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ 4 ವಿಕೆಟ್ ಕಳೆದುಕೊಂಡು 203 ರನ್ ಗಳಿಸಿದೆ.



ಅಕ್ರಮ ಬಾಂಗ್ಲಾ ವಲಸಿಗರ ಗಡಿಪಾರಿಗೆ ಕ್ರಮ 2



ಗುರುವಾರ ರಾಜ್ಯಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಗೆ ಉತ್ತರಿಸಿದ ಪ್ರಧಾನಿ ನರೇಂದ್ರ ಮೋದಿ ಅವರು, ನಾವು ಭವಿಷ್ಯಕ್ಕೆ ಸಿದ್ಧವಾಗಿರುವ ನೀತಿಗಳ ಮೇಲೆ ಬಲವಾದ ಒತ್ತು ನೀಡಿದ್ದೇವೆ ಎಂದರು.



ಪ್ರಧಾನಿ ಅನುಪಸ್ಥಿತಿಯಲ್ಲಿ ರಾಷ್ಟ್ರಪತಿ ವಂದನಾ ನಿರ್ಣಯ ಅಂಗೀಕಾರ » 4

# ದೇವೇಗೌಡರ ನೇತೃತ್ವದಲ್ಲಿ ಕೇಂದ್ರ ಸಚಿವರ ಭೇಟಿ

## ಜಿಲ್ಲೆಯ ರೈಲ್ವೆ ಯೋಜನೆ, ಮಗಾ ಡೇರಿ ಕುರಿತು ಗಮನ ಸೆಳೆದ ಹೆಚ್.ಡಿ.ಕುಮಾರಸ್ವಾಮಿ, ಹೆಚ್.ಡಿ.ರೇವಣ್ಣ

• ಪ್ರಜೋದಯ ವರದಿ

**ಹಾಸನ :** ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅವರ ನೇತೃತ್ವದಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ದೆಹಲಿಯಲ್ಲಿ ವಾಸ್ತವ್ಯ ಹೂಡಿ, ಕೇಂದ್ರ ಸಚಿವರನ್ನು ಭೇಟಿಯಾಗಿ ಜಿಲ್ಲೆಯಲ್ಲಿ ಆಗಬೇಕಿರುವ ಕಾಮಗಾರಿಗಳ ಕುರಿತು ಚರ್ಚಿಸಿ, ಅನುದಾನ ಬಿಡುಗಡೆಗೆ ಮನವಿ ಮಾಡಿದರು.

ಬುಧವಾರ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು, ಕೇಂದ್ರ ಪರಿಸರ, ಅರಣ್ಯ ಸಚಿವ ಭೂಪೇಂದ್ರ ಯಾದವ್ ಅವರನ್ನು ಭೇಟಿಯಾಗಿ ಜಿಲ್ಲೆಯಲ್ಲಿರುವ ಕಾಡಾನೆ-ಮಾನವ ಸಂಘರ್ಷದ ಬಗ್ಗೆ ಚರ್ಚೆ ನಡೆಸಿದರು. ಜೊತೆಗೆ ಕೇಂದ್ರದ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್, ರೈಲ್ವೆ ಸಚಿವ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಗುರುವಾರ ಮತ್ತೊಮ್ಮೆ ಹೆಚ್.ಡಿ. ದೇವೇಗೌಡರ ನೇತೃತ್ವದಲ್ಲಿ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ನವದೆಹಲಿಯಲ್ಲಿ ಭೇಟಿ ಮಾಡಿ ಜಿಲ್ಲೆಯ ರೈಲ್ವೆ ಯೋಜನೆಗಳ ಬಗ್ಗೆ ಮನವಿ ಮಾಡಿದರು. ಈ ವೇಳೆ ದುದ್ದ ರೈಲ್ವೆ ಮೇಲ್ಸೇತುವೆ ಮತ್ತು ಅಂಡರ್ ಪಾಸ್ ಯೋಜನೆಗೆ 150 ಕೋ.ರೂ., ಮೊಸಳೆ



ಹೊಸಳ್ಳಿ ಬಳಿ ಮೇಲ್ಸೇತುವೆ ಮತ್ತು ನೂತನ ಪ್ಲಾಟ್ ಫಾರಂಗೆ 120 ಕೋ.ರೂ., ಮೊಸಳೆ ಹೊಸಳ್ಳಿಯಲ್ಲಿ ಎಲ್ಲಾ ರೈಲುಗಳ ನಿಲುಗಡೆ, ಚನ್ನರಾಯಪಟ್ಟಣ, ಹೊಳೆನರಸೀಪುರ, ಅರಕಲಗೂಡು, ಕುಶಾಲನಗರ ನಡುವೆ ಹೊಸ ರೈಲು ಮಾರ್ಗ ಸರ್ವೆಗೆ ಈಗಾಗಲೇ ಅನುಮೋದನೆ ಸಿಕ್ಕಿದ್ದು, ಕೂಡಲೇ ಸರ್ವೆ ಕಾರ್ಯ ಆರಂಭಿಸಿ ನೂತನ ರೈಲು ಮಾರ್ಗ ನಿರ್ಮಾಣ ಕಾಮಗಾರಿ ಕೈಗೊಳ್ಳುವಂತೆ ಮನವಿ ಸಲ್ಲಿಸಿದರು.

ದುದ್ದದಲ್ಲಿ ಸದ್ಯ ಯಾವುದೇ ರೈಲುಗಳ ನಿಲುಗಡೆ ಇಲ್ಲ. ಆದರೂ ಬೇರೆ ರೈಲುಗಾಡಿ ಓಡಾಡುವ ಸಂದರ್ಭದಲ್ಲಿ ಗೇಟ್ ಹಾಕಿದರೆ ತುರ್ತು ವಾಹನ ಸಂಚಾರಕ್ಕೆ ಅಡ್ಡಿಯಾಗುತ್ತಿದೆ. ಅದರಲ್ಲೂ ಆ್ಯಂಬುಲೆನ್ಸ್ ಇತ್ಯಾದಿ ವಾಹನದಲ್ಲಿ ಸಂಚರಿಸುವ ರೋಗಿಗಳಿಗೆ ತೊಂದರೆ ಆಗುತ್ತಿದೆ. ಹೀಗಾಗಿ ಇಲ್ಲಿ ಮೇಲ್ಸೇತುವೆ ಇಲ್ಲವೇ ಅಂಡರ್ ಪಾಸ್ ನಿರ್ಮಾಣ ಮಾಡಬೇಕೆಂಬುದು ಹಲವು ದಿನಗಳ ಬೇಡಿಕೆಯಾಗಿದೆ ಎಂದು ಸಚಿವರ ಗಮನ ಸೆಳೆದರು. ಈ ಎಲ್ಲಾ ಬೇಡಿಕೆಗಳಿಗೆ ಕೇಂದ್ರ ರೈಲ್ವೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.

**ಪಶುಸಂಗೋಪನೆ ಸಚಿವರ ಭೇಟಿ**

ಬಳಿಕ ಕೇಂದ್ರದ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಖಾತೆ ಸಚಿವ ರಾಜೀವ್ ರಂಜನ್ ಸಿಂಗ್ ಅವರನ್ನು ಸಂಸತ್ ಭವನದಲ್ಲಿರುವ ಅವರ ಕಚೇರಿಯಲ್ಲಿ ಮಾಜಿ ಸಚಿವರು, ಹಾಸನ ಹಾಲು ಒಕ್ಕೂಟದ ಅಧ್ಯಕ್ಷ ಹೆಚ್.ಡಿ.ರೇವಣ್ಣ ಅವರು ಹೆಚ್.ಡಿ.ಕುಮಾರಸ್ವಾಮಿ ಅವರರೊಂದಿಗೆ ಭೇಟಿ ಮಾಡಿ ಮಾತುಕತೆ ನಡೆಸಿದರು. ಹಾಸನ ಮೆಗಾ ಡೇರಿ ವಿಸ್ತರಣಾ ಯೋಜನೆ ಮತ್ತು ಕರ್ನಾಟಕದ ಹೈನೋದ್ಯಮದ ಒಟ್ಟಾರೆ ಅಭಿವೃದ್ಧಿಯ ಕುರಿತು ನಾವು ವಿವರವಾದ ಮತ್ತು ರಚನಾತ್ಮಕ ಚರ್ಚೆಗಳನ್ನು ನಡೆಸಿದೆವು. ಪ್ರಧಾನಿ ನರೇಂದ್ರ ಮೋದಿ ಅವರ ವಿಕಸಿತ ಭಾರತ ದೃಷ್ಟಿಕೋನಕ್ಕೆ ಅನುಗುಣವಾಗಿದ್ದು, ಗ್ರಾಮೀಣ ಜೀವನೋಪಾಯವನ್ನು ಬಲಪಡಿಸುವುದು ಮತ್ತು ಸುಸ್ಥಿರ ಬೆಳವಣಿಗೆಯ ಮೇಲೆ ನಮ್ಮ ಚರ್ಚೆಯು ಕೇಂದ್ರೀಕೃತವಾಗಿತ್ತು ಎಂದು ರೇವಣ್ಣ ಅವರು ತಿಳಿಸಿದ್ದಾರೆ.

**ಮೆಗಾ ಡೇರಿ ವಿಸ್ತರಣೆಗೆ ಕೇಂದ್ರದ ನೆರವು**

ಹಾಸನ ಮೆಗಾ ಡೇರಿ ವಿಸ್ತರಣಾ ಯೋಜನೆಗೆ ರಾಷ್ಟ್ರೀಯ ಡೇರಿ ಅಭಿವೃದ್ಧಿ ಮಂಡಳಿ (ಎನ್‌ಡಿಡಿಬಿ) ಮೂಲಕ 150 ಕೋ.ರೂ. ಸಾಲ ಸೌಲಭ್ಯ ಕೊಡಿಸಲು ಕೇಂದ್ರ ಸರ್ಕಾರ ಸಮ್ಮತಿಸಿದೆ.ಸಾಲ ಮಂಜೂರು ಮಾಡಲು ಹೈನುಗಾರಿಕೆ ಮತ್ತು ಪಶುಸಂಗೋಪನಾ ಖಾತೆ ಸಚಿವರಾದ ರಾಜೀವ್ ರಂಜನ್ ಸಿಂಗ್ (ಲಲನ್ ಸಿಂಗ್) ಅವರು ಒಪ್ಪಿಗೆ ನೀಡಿದರು. ತಮ್ಮ ಮನವಿಗೆ ಸ್ಪಂದಿಸಿದ ಹೈನುಗಾರಿಕೆ ಸಚಿವರಿಗೆ ಕುಮಾರಸ್ವಾಮಿ ಅವರು ಕೃತಜ್ಞತೆಗಳನ್ನು ಸಲ್ಲಿಸಿದರು.

ಹಾಸನ ಹಾಲು ಒಕ್ಕೂಟವು ಲಾಭದ ದಾರಿಯಲ್ಲಿ ನಡೆಯುತ್ತಿರುವ ಅತ್ಯುತ್ತಮ ಸಹಕಾರ ಒಕ್ಕೂಟವಾಗಿದೆ. ಹಾಸನ, ಚಿಕ್ಕಮಗಳೂರು

» ನಾಲ್ಕನೇ ಪುಟದಲ್ಲಿ

### ಜಿಲ್ಲೆಗೆ ಪ್ರಧಾನಿ ಕರೆತರುವ ಪ್ರಯತ್ನ

ನಗರದಲ್ಲಿ ನೂತನವಾಗಿ ನಿರ್ಮಾಣಗೊಂಡು ಕೆಲ ತಿಂಗಳಲ್ಲಿ ಉದ್ಘಾಟನೆಗೆ ಸಿದ್ಧವಾಗಿರುವ ಮೆಗಾ ಡೇರಿ ಉದ್ಘಾಟನೆ ಪ್ರಧಾನಿ ನರೇಂದ್ರಮೋದಿ ಸೇರಿ ಕೇಂದ್ರದ ಹಲವು ಸಚಿವರನ್ನು ಜಿಲ್ಲೆಗೆ ಕರೆ ತರುವ ಪ್ರಯತ್ನ ನಡೆಸಲಾಗುತ್ತಿದೆ. ಆ ಪ್ರಯತ್ನದ ಭಾಗವಾಗಿ ಗುರುವಾರ ಹೆಚ್.ಡಿ.ರೇವಣ್ಣ ಅವರು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಕೇಂದ್ರ ನಾಯಕರನ್ನು ಭೇಟಿ ಮಾಡಲಾಗುತ್ತಿದೆ. ಈ ಕುರಿತು ಪಶುಸಂಗೋಪನೆ ಮತ್ತು ಹೈನುಗಾರಿಕೆ ಖಾತೆ ಸಚಿವ ರಾಜೀವ್ ರಂಜನ್ ಸಿಂಗ್ ಅವರೊಂದಿಗೆ ಸುದೀರ್ಘವಾಗಿ ಮಾತುಕತೆ ನಡೆಸಲಾಯಿತು.

# ಸಂತ್ರಸ್ತೆ ಅಪಹರಣ ಕೇಸ್: ಹೆಚ್.ಡಿ.ರೇವಣ್ಣಗೆ ಹೈಕೋರ್ಟ್ ಶಾಕ್

• ಪ್ರಜೋದಯ ವರದಿ



**ಬೆಂಗಳೂರು:** ಅತ್ಯಾಚಾರ ಸಂತ್ರಸ್ತೆ ಯನ್ನು ಅಪಹರಿಸಿದ ಆರೋಪ ಪ್ರಕರಣ ಸಂಬಂಧ ಮಾಜಿ ಸಚಿವ ಹೆಚ್.ಡಿ. ರೇವಣ್ಣ ಅವರ ವಿರುದ್ಧ ದೋಷಾರೋಪ ಹೊರಿಸದಂತೆ ಈ ಹಿಂದೆ ನೀಡಲಾಗಿದ್ದ ಮಧ್ಯಂತರ ತಡೆಯಾಜ್ಞೆಯನ್ನು ಹೈಕೋರ್ಟ್ ಗುರುವಾರ ತೆರವುಗೊಳಿಸಿದೆ.

ತಮ್ಮ ವಿರುದ್ಧದ ಪ್ರಕರಣವನ್ನು ರದ್ದುಪಡಿಸುವಂತೆ ಕೋರಿ ಹೆಚ್.ಡಿ ರೇವಣ್ಣ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆದ ವೇಳೆ, ರೇವಣ್ಣ ಪರ ವಕೀಲರು ವಾದ ಮಂಡನೆಗೆ ಕಾಲಾವಕಾಶ ಕೋರಿದರು. ಹಿರಿಯ ವಕೀಲರು ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ಮುಂದೆ ಹಾಜರಾಗಬೇಕಿರುವುದರಿಂದ ವಿಚಾರಣೆಯನ್ನು ಮುಂದೂಡಬೇಕೆಂದು ನ್ಯಾಯಪೀಠಕ್ಕೆ ಮನವಿ ಮಾಡಿದರು.

ಈ ಮನವಿಯಿಂದ ಅಸಮಾಧಾನಗೊಂಡ ಹೈಕೋರ್ಟ್, ರೇವಣ್ಣ ಪರ ವಕೀಲರನ್ನು ತರಾಟೆಗೆ ತೆಗೆದುಕೊಂಡಿತು. ಇದು ಸಾಂವಿಧಾನಿಕ ನ್ಯಾಯಾಲಯ. ಮ್ಯಾಜಿಸ್ಟ್ರೇಟ್ ಕೋರ್ಟ್ ನೆಪವೊಡ್ಡಿ ಇಲ್ಲಿನ ವಿಚಾರಣೆ ಮುಂದೂಡಲು ಕೋರುವುದು ಸರಿಯಲ್ಲ. ಈ ನ್ಯಾಯಾಲಯದ ಅಧಿಕಾರವನ್ನು ಕುಗ್ಗಿಸಬೇಡಿ. ಇದು ಅಹಂನ ವಿಚಾರವಲ್ಲ, ಆದರೆ ನ್ಯಾಯಾಲಯದ ಪ್ರಕ್ರಿಯೆ ಬಗ್ಗೆ ನಿಮಗೆ ತಿಳಿದಿರಬೇಕು ಎಂದು ನ್ಯಾಯಪೀಠ ಕಟುವಾಗಿ ನುಡಿಯಿತು.

ವಾದ ಮಂಡನೆಗೆ ಅವಕಾಶ ನೀಡಿ ವಿಚಾರಣೆಯನ್ನು ಎರಡು ವಾರಗಳ ಕಾಲ ಮುಂದೂಡಿದ ಹೈಕೋರ್ಟ್, ಇದೇ ವೇಳೆ ಮಹತ್ವದ ಆದೇಶವೊಂದನ್ನು ನೀಡಿತು. ರೇವಣ್ಣ ಅವರ ವಿರುದ್ಧ ಕೆಳಹಂತದ ನ್ಯಾಯಾಲಯದಲ್ಲಿ ದೋಷಾರೋಪ ಹೊರಿಸದಂತೆ ನೀಡಲಾಗಿದ್ದ ಮಧ್ಯಂತರ ತಡೆಯಾಜ್ಞೆಯನ್ನು ತೆರವುಗೊಳಿಸಿತು. ಇದರಿಂದಾಗಿ ತನಿಖಾ ಸಂಸ್ಥೆಗೆ ಮುಂದಿನ ಕಾನೂನು ಪ್ರಕ್ರಿಯೆಗಳನ್ನು ಕೈಗೊಳ್ಳಲು ಹಾದಿ ಸುಗಮವಾದಂತಾಗಿದೆ.

# ವಿಮಾನ ನಿಲ್ದಾಣ ಭೂ ಪರಿಹಾರಕ್ಕೆ ಆಗ್ರಹ

## ಕರ್ನಾಟಕ ಪ್ರಾಂತ ರೈತ ಸಂಘದಿಂದ ಲಕ್ಷ್ಮಿಸಾಗರ ಗ್ರಾಮಸ್ಥರ ಪ್ರತಿಭಟನೆ

• ಪ್ರಜೋದಯ ವರದಿ

**ಹಾಸನ:** ವಿಮಾನ ನಿಲ್ದಾಣಕ್ಕಾಗಿ ತಾಲ್ಲೂಕಿನ ಲಕ್ಷ್ಮಿಸಾಗರ ಗ್ರಾಮದ ಸರ್ವೆ ನಂ.35 ರಲ್ಲಿ ಸ್ವಾಧೀನ ಪಡಿಸಿಕೊಂಡ ಭೂಮಿಗೆ ಸೂಕ್ತ ಭೂ ಪರಿಹಾರ ನೀಡುವಂತೆ ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘ (ಕೆಪಿಆರ್‌ಎಸ್) ದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಯಿತು.




ಲಕ್ಷ್ಮಿಸಾಗರ ಗ್ರಾಮದ ಸರ್ವೆ ನಂಬರ್ 35 ರಲ್ಲಿ 26 ರೈತ ಕುಟುಂಬಗಳಿಗೆ ತಲಾ 26 ಗುಂಟೆಯಂತೆ ಕೃಷಿ ಭೂಮಿಯನ್ನು 1985 ರಲ್ಲಿ ಸರ್ಕಾರ ಮಂಜೂರು ಮಾಡಿ ಹಕ್ಕುಪತ್ರ ನೀಡಿತ್ತು. ಅಲ್ಲಿಂದ ಇಲ್ಲಿಯವರೆಗೂ ನಿರಂತರವಾಗಿ ಎಲ್ಲಾ ಕುಟುಂಬಗಳು ಈ ಭೂಮಿಯನ್ನು ಸಾಗುವಳಿ ಮಾಡಿ ಸ್ವಾಧೀನದಲ್ಲಿದ್ದಾರೆಂದು ತಿಳಿಸಿದರು.

1997 ರಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ವಿಮಾನ ನಿಲ್ದಾಣಕ್ಕಾಗಿ ಭೂಸ್ವಾಧೀನ ಪ್ರಕ್ರಿಯೆ ನಡೆಸಿ ರೈತರು ಸ್ವಾಧೀನದಲ್ಲಿರುವ ಭೂಮಿಯಲ್ಲಿ ಸ್ವಲ್ಪ ಭಾಗವನ್ನು ಸ್ವಾಧೀನ ಪಡಿಸಿಕೊಂಡು ಪರಿಹಾರ ನೀಡಿದ್ದಾರೆ. ವಿಮಾನ ನಿಲ್ದಾಣದ ಸ್ವಾಧೀನಕ್ಕೆ ಒಳಪಡುವ 12 ಎಕರೆ 22 ಗುಂಟೆ ವಿಸ್ತೀರ್ಣವನ್ನು ಶೇ.50 ರಷ್ಟು ಹಣ ಪಾವತಿಸಿಕೊಂಡು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ವರ್ಗಾಯಿಸಿರುತ್ತಾರೆ. ಉಳಿಕೆ ಭೂಮಿಯನ್ನೂ ತಮಗೆ ಸೇರಬೇಕೆಂದು ರೈತರಿಗೆ ದೌರ್ಜನ್ಯ ನಡೆಸಿ ಭೂಮಿ ಸ್ವಾಧೀನ ಮಾಡಿಕೊಳ್ಳುವ ಪ್ರಕ್ರಿಯೆಯನ್ನು ನಡೆಸಲು ಮುಂದಾಗಿದ್ದಾರೆಂದರು. ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಪತ್ರ ಬರೆದು ಲಕ್ಷ್ಮಿಸಾಗರ ಗ್ರಾಮದ ಸರ್ವೆ ನಂಬರ್ 35 ರಲ್ಲಿ ಜಿಲ್ಲಾ ಖಜಾನೆಗೆ ಶೇ.50 ರಷ್ಟು ಹಣ ಪಾವತಿಸಿರುವ 12 ಎಕರೆ 22 ಗುಂಟೆ ಜಮೀನನ್ನು ಹಿಂಪಡೆದು ಹೊಸದಾಗಿ ನಿಯಮಾನುಸಾರ ಭೂ ಸ್ವಾಧೀನ ಪಡಿಸಿಕೊಂಡು ಖಾತೆದಾರರಿಗೆ

» ನಾಲ್ಕನೇ ಪುಟದಲ್ಲಿ

# ಪ್ರತಿಭಟನೆಯೊಂದಿಗೆ ತಂಬಾಕು ಮಾರುಕಟ್ಟೆ ಆರಂಭ

## ಗುಣಮಟ್ಟದ ಹೊಗೆಸೊಪ್ಪು ಕೆ.ಜಿ.ಗೆ 310 ರೂ. | ಹುಸಿಯಾದ ಬೆಳೆಗಾರರ ನಿರೀಕ್ಷೆ

• ಪ್ರಜೋದಯ ವರದಿ

**ಅರಕಲಗೂಡು:** ತಾಲ್ಲೂಕಿನ ರಾಮನಾಥಪುರ ತಂಬಾಕು ಹರಾಜು ಮಾರುಕಟ್ಟೆ ಪ್ರಕ್ರಿಯೆ ಗುರುವಾರದಿಂದ ಪುನರಾರಂಭಗೊಂಡಿದೆಯಾದರೂ ಬೆಲೆ ನಿಗದಿಯಲ್ಲಿ ತಾರತಮ್ಯ ಮಾಡಲಾಗುತ್ತಿದೆ ಎಂದು ಆರೋಪಿಸಿ ಬೆಳೆಗಾರರು ಪ್ರತಿಭಟನೆ ನಡೆಸಿದರು.

ಗುಣಮಟ್ಟದ ತಂಬಾಕು ಪ್ರತಿ ಕೆ.ಜಿ.ಗೆ ಕೇವಲ 310 ರೂ. ಬೆಲೆ ನಿಗದಿಪಡಿಸಿರುವುದು ಖಂಡನೀಯ. ಮಾರುಕಟ್ಟೆಯಲ್ಲಿ 11 ಕಂಪನಿಗಳು ತಂಬಾಕು ಖರೀದಿಯಲ್ಲಿ ತೊಡಗಿದ್ದು, ಗುಣಮಟ್ಟದ ತಂಬಾಕು ಕೆ.ಜಿ.ಗೆ 311 ರೂ. ದೊರೆತಿದೆ. ಈ ಹಿಂದೆ 321 ರೂ. ಸಿಕ್ಕಿತ್ತು. ಎರಡು ವಾರ ತಡವಾಗಿ ಪುನರಾರಂಭಗೊಂಡಿರುವ ಮಾರುಕಟ್ಟೆಯಲ್ಲಿ ಕೆ.ಜಿ.ತಂಬಾಕಿಗೆ 322 ರಿಂದ 330 ರೂ. ವರೆಗೆ ಬೆಲೆ ದೊರೆಯಬಹುದೆಂಬ ಭರವಸೆಯಲ್ಲಿದ್ದ ಬೆಳೆಗಾರರಿಗೆ ದಿಢೀರ್ 10 ರೂ. ಇಳಿಕೆ ಮಾಡಿರುವುದು ಖಂಡನೀಯವೆಂದು ಮಾರುಕಟ್ಟೆಯನ್ನು ಬಂದ್ ಮಾಡಿ ಪ್ರತಿಭಟನೆಗೆ ಮುಂದಾದರು.

ಮಾರುಕಟ್ಟೆ ಈಗಾಗಲೇ ಸ್ಥಗಿತಗೊಂಡು ರೈತರಿಗೆ ಸಂಕಷ್ಟ ತಂದೊಡ್ಡಿದೆ. ಈಗ ಪುನಃ ಹೋರಾಟ ಮಾಡಿ ಮತ್ತೆ ಬಂದ್ ಮಾಡುವ ಬದಲು ಸ್ಥಿರವಾದ ಬೆಲೆ ನಿಗದಿ ಮಾಡಿ ಬೇಲ್‌ಗಳನ್ನು ಖರೀದಿಸುವಂತೆ ಕೆಲ ಬೆಳೆಗಾರರು ಮನವಿ ಮಾಡಿದ ಮೇರೆಗೆ ಹೋರಾಟವನ್ನು ತಾತ್ಕಾಲಿಕವಾಗಿ ಕೈಬಿಡಲಾಯಿತು. ಆದರೂ ಕೂಡ ಬೆಲೆ ಸ್ಥಿರತೆಯನ್ನು ಕಾಣದೇ ರೈತರು, ವರ್ತಕರು ಮತ್ತು ಮಂಡಳಿಯವರ ನಡುವಿನ ಹಗ್ಗಾ ಜಗ್ಗಾಟ ನಡುವೆಯೂ ಗುಣಮಟ್ಟದ ಕೆ.ಜಿ.

» ನಾಲ್ಕನೇ ಪುಟದಲ್ಲಿ



### ಅಬಕಾರಿ ಸುಂಕ ರದ್ದು: ಸ್ವಾಗತ




**ಅರಕಲಗೂಡು :** ತಂಬಾಕು ಬೆಳೆ ಮೇಲೆ ಕೇಂದ್ರ ಸರ್ಕಾರ ವಿಧಿಸಿದ್ದ ಶೇ.18ರಷ್ಟು ಅಬಕಾರಿ ಸುಂಕವನ್ನು ರದ್ದುಪಡಿಸಿರುವ ಕ್ರಮವನ್ನು ತಂಬಾಕು ಬೆಳೆಗಾರರ ಸಂಘದ ಮುಖಂಡ ಕೆ.ಎಸ್.ಸಾಂಬಶಿವಪ್ಪ ಅವರು ಸ್ವಾಗತಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕ ಎ.ಮಂಜು ಅವರಲ್ಲಿ ತಂಬಾಕು ಬೆಳೆಗಾರರು ಅಳಲು ತೋಡಿಕೊಂಡಾಗ ಕಂಪನಿ ಪ್ರತಿನಿಧಿಗಳ ಜೊತೆ ಬೆಳೆಗಾರರ ಸಮ್ಮುಖದಲ್ಲಿ ಮಾತುಕತೆ ನಡೆಸಿದ್ದರು. ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರನ್ನು ಭೇಟಿಯಾಗಿ ಬೆಳೆಗಾರರ ಸಂಕಷ್ಟವನ್ನು ವಿವರಿಸಿ ಅಬಕಾರಿ ಸುಂಕ ರದ್ದುಪಡಿಸುವಂತೆ ಮನವಿ ಮಾಡಿದ್ದರು.

ಕುಮಾರಸ್ವಾಮಿ ಅವರು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್‌ರನ್ನು ಭೇಟಿ ಮಾಡಿ ಸುಂಕ ರದ್ದುಪಡಿಸಲು ಕ್ರಮ ಕೈ ಗೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆಂದರು. ತಂಬಾಕು ಬೆಳೆಗಾರರಾದ ನೇತ್ರಪಾಲ, ನರಸೇಗೌಡ, ಕಾಕೋಡನಹಳ್ಳಿ ಮಂಜು ಇದ್ದರು.

# ಕಾಡಾನೆ ದಾಳಿಗೆ ಅಡಿಕೆ ಮರಗಳು ನಾಶ

• ಪ್ರಜೋದಯ ವರದಿ

**ಸಕಲೇಶಪುರ:** ಕಾಡಾನೆಗಳ ದಾಳಿಗೆ ಅಪಾರ ಪ್ರಮಾಣದ ಅಡಿಕೆ ಬೆಳೆ ಹಾಗು ಕೃಷಿ ಉಪಕರಣಗಳು ನಾಶವಾಗಿರುವ ಘಟನೆ ತಾಲ್ಲೂಕಿನ ಹೊಸಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಪ್ರತಾಪ್ ಎಂಬುವವರ ಕಾಫಿ ತೋಟಕ್ಕೆ ನುಗ್ಗಿರುವ ಕಾಡಾನೆಗಳ ಹಿಂಡು, ಅಡಿಕೆ ಮರಗಳನ್ನು ಮುರಿದು ಹಾಕಿ, ಮೋಟಾರ್, ಟಾರ್ಪಾಲ್, ಪ್ಲಾಸ್ಟಿಕ್ ಬುಟ್ಟಿಗಳನ್ನು ಕೃಷಿ ಹೊಂಡಕ್ಕೆ ಎಸೆದಿವೆ. ಐದಾರು ವರ್ಷಗಳಿಂದ ಬೆಳೆದಿದ್ದ ಸುಮಾರು 50 ಅಡಿಕೆ ಗಿಡಗಳನ್ನು ಕಾಡಾನೆಗಳು ಮುರಿದು ನಾಶ ಮಾಡಿದ್ದು, ಹಲವು ಅಡಿಕೆ ಗಿಡಗಳು ಫಸಲು ನೀಡುತ್ತಿದ್ದವು. ಜೊತೆಗೆ ಕಾಫಿ ಗಿಡಗಳನ್ನು ತುಳಿದು ಅಪಾರ ಪ್ರಮಾಣದ ನಷ್ಟ ಉಂಟು ಮಾಡಿವೆ.



ತಾಲ್ಲೂಕಿನ ಮಾಣಿಗದ್ದೆ ಉಣ್ಣಿಕೃಷ್ಣನ್ ಹಾಗು ದಾಸೇಗೌಡರ ತೋಟ ಸುತ್ತಮುತ್ತ ಕಾಡಾನೆಗಳು ಕಂಡು ಬಂದಿವೆ. ಅದೇ ರೀತಿ ಹೆತ್ತೂರು ಮತ್ತು ಯಸಳೂರು ಹೋಬಳಿ ವ್ಯಾಪ್ತಿಯ ಹೊಸಳ್ಳಿ ಗ್ರಾಮದ ಗಜಕೇಸರಿ ಬೆಟ್ಟ, ಹಾಡ್ಲಾಳ್ಳಿ ಗ್ರಾಮದ ಬಸರಿ ಹಡ್ಲು, ಬಟ್ಟೆಕುಮಾರಿ, ಹೆಗ್ಗಡಿಹಳ್ಳಿ ಗ್ರಾಮದ ಅಕೇಶಿಯ ಪ್ಲಾಂಟೇಷನ್, ಬೆಟ್ಟದ ಮನೆ ಗ್ರಾಮದ ಬೆಟ್ಟ, ಪಟ್ಲ ಗ್ರಾಮದ ದೊಡ್ಡ ಹಡ್ಲು, ಕೊಂತಾನಮನೆ ಗ್ರಾಮದ ಅರೆಗದ್ದೆ, ಹಾಡ್ಯಾ ಗ್ರಾಮದ ದೀನೇಕೆರೆ ಹಡ್ಲು ಸುತ್ತಮುತ್ತ ಕಾಡಾನೆಗಳು ಕಾಣಿಸಿಕೊಂಡು ಸಾರ್ವಜನಿಕರಲ್ಲಿ ಆತಂಕ ಸೃಷ್ಟಿಸಿವೆ.

# ಸ್ಟಾರ್ಟ್‌ಅಪ್‌ಗಳ ಮೂಲಕ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಿ

## ನಿರ್ಮಲಾನಂದನಾಥ ಸ್ವಾಮೀಜಿ ಸಲಹೆ | ಕೃಷಿಕ್ ಫೌಂಡೇಶನ್‌ನ ವೈ.ಕೆ.ಪಿ. ಭವನ ಉದ್ಘಾಟನೆ

• ಪ್ರಜೋದಯ ವರದಿ

**ಹಾಸನ:** ಸರ್ಕಾರಿ ಉದ್ಯೋಗವನ್ನಷ್ಟೇ ಗುರಿಯಾಗಿಸಿಕೊಳ್ಳದೆ ಸ್ಟಾರ್ಟ್‌ಅಪ್‌ಗಳತ್ತ ಯುವಕರು ಗಮನ ಹರಿಸಿ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು. ಸ್ವಬದುಕು ಕಟ್ಟಿಕೊಳ್ಳಲು ಬಯಸುವವರಿಗೆ ಆದಿಚುಂಚನಗಿರಿ ಮಠ ಹಾಗು ಕೃಷಿಕ್ ಸರ್ವೋದಯ ಫೌಂಡೇಶನ್ ಬೆನ್ನೆಲುಬಾಗಿ ಇರುತ್ತದೆಂದು ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರು ಹೇಳಿದರು.

ನಗರದ ಎಂ.ಜಿ. ರಸ್ತೆಯಲ್ಲಿ ನಿರ್ಮಿಸಿರುವ ಕೃಷಿಕ್ ಸರ್ವೋದಯ ಫೌಂಡೇಶನ್ ಹಾಸನ ಶಾಖೆಯ ನೂತನ ವೈ.ಕೆ.ಪಿ. ಭವನ ಉದ್ಘಾಟಿಸಿ ಮಾತನಾಡಿದ ಅವರು, ಹತ್ತು ವರ್ಷಗಳ ಹಿಂದೆ ಸ್ಟಾರ್ಟ್‌ಅಪ್ ಬಗ್ಗೆ ಏನೂ ಗೊತ್ತಿರಲಿಲ್ಲ. 2016ರಿಂದ ಈ ವರೆಗೆ ದೇಶದಲ್ಲಿ ಸುಮಾರು 2 ಲಕ್ಷ ಸ್ಟಾರ್ಟ್‌ಅಪ್‌ಗಳು ಪ್ರಾರಂಭವಾಗಿವೆ. ಜಗತ್ತು ವೇಗವಾಗಿ ಬೆಳೆಯುತ್ತಿದ್ದು, ಅದಕ್ಕೆ ತಕ್ಕಂತೆ ಯುವಕರು ಕೌಶಲ್ಯದಿಂದ ತಮ್ಮ ಸಾಮರ್ಥ್ಯ ಸಾಬೀತು ಪಡಿಸಬೇಕೆಂದು ಸಲಹೆ ನೀಡಿದರು.



ನಾನು ಹಾಗು ನನ್ನ ಕುಟುಂಬ ಚೆನ್ನಾಗಿದ್ದರೆ ಸಾಕೆಂದು ಯೋಚಿಸಿದರೆ ಸಮಾಜ ಪ್ರಗತಿ ಹೊಂದಲು ಸಾಧ್ಯವಿಲ್ಲ. ಅದೇ ರೀತಿಯ ಯೋಚನೆಯನ್ನು ಕೃಷಿಕ್ ಸರ್ವೋದಯ ಫೌಂಡೇಶನ್‌ನ ಸಂಸ್ಥಾಪಕ ಅಧ್ಯಕ್ಷ ವೈ.ಕೆ.ಪುಟ್ಟಸ್ವಾಮಿಗೌಡ ಹಾಗು ಸ್ನೇಹಿತರು ಮಾಡದಿದ್ದರೆ ಇಂದು ಸಂಸ್ಥೆ ಇಷ್ಟು ದೊಡ್ಡದಾಗಿ ಬೆಳೆಯುತ್ತಿರಲಿಲ್ಲ. ಜಾತಿ, ಮತ, ಧರ್ಮ ಬೇಧವಿಲ್ಲದೆ ಎಲ್ಲರಿಗೂ ಇಲ್ಲಿ ಉಚಿತ ತರಬೇತಿ ನೀಡಲಾಗುತ್ತಿದೆ. ಇಂತಹ ಮಹತ್ಕಾರ್ಯಗಳು ಸಮಾಜದಲ್ಲಿ ಹೆಚ್ಚಾಗಬೇಕೆಂದರು.

**ಒಂಟಿಯಾಗಿ ದೇಶ ಕಟ್ಟಲು ಸಾಧ್ಯವಿಲ್ಲ**

ಯಾವುದೇ ಒಂದು ಮಹತ್ತರ ಬದಲಾವಣೆ ತರುತ್ತೇವೆಂದರೆ ಒಬ್ಬರಿಂದ ಸಾಧ್ಯವಿಲ್ಲ. ಸ್ವಾಮಿ ವಿವೇಕಾನಂದರು ಕೆ.ಹೆಚ್.ರಾಮಯ್ಯ ಅವರಿಗೆ ಈ ವಿಚಾರವಾಗಿ ಸ್ಪಷ್ಟ

» ನಾಲ್ಕನೇ ಪುಟದಲ್ಲಿ

# ಹಾಸನ ಜಿಲ್ಲಾಧಿಕಾರಿ ಫೇಸ್‌ಬುಕ್ ಖಾತೆ ಹ್ಯಾಕ್

• ಪ್ರಜೋದಯ ವರದಿ

**ಹಾಸನ:** ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರ ಭಾವಚಿತ್ರವಿರುವ ಫೇಸ್ ಬುಕ್ ಐಡಿಯಿಂದ ಬೇರೆಯವರ ಮೊಬೈಲ್‌ಗಳಿಗೆ ಸಂದೇಶ ರವಾನೆಯಾಗುತ್ತಿದ್ದು, ಖಾತೆ ಹ್ಯಾಕ್ ಆಗಿದೆ.

ಫೇಸ್ ಬುಕ್ ಐಡಿಯಿಂದ ಯಾವುದೇ ಸಂದೇಶ ಜಿಲ್ಲಾಧಿಕಾರಿ ಕಳುಹಿಸುತ್ತಿಲ್ಲ. ನಕಲಿ ಖಾತೆ ಮೂಲಕ ಸೈಬರ್ ಅಪರಾಧಿಗಳು ಸಂದೇಶಗಳನ್ನು ರವಾನಿಸುತ್ತಿದ್ದಾರೆ. ಅನಧಿಕೃತ ಖಾತೆಯಿಂದ ಬರುವ ಸಂದೇಶಗಳಿಗೆ ಪ್ರತಿಕ್ರಿಯೆ ನೀಡದಂತೆ ಹಾಗು ದೂರುಗಳು ಇದ್ದರೆ ಕಚೇರಿ ವೇಳೆಯಲ್ಲಿ ಭೇಟಿ ಮಾಡಿ ನೀಡಬೇಕೆಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದ್ದಾರೆ.

# ಶಿವಲಿಂಗೇಗೌಡ ವಿರುದ್ಧ ಪ್ರಕರಣ ದಾಖಲಿಸಿ

• ಪ್ರಜೋದಯ ವರದಿ

**ಹಾಸನ:** ಅಧಿವೇಶನದಲ್ಲಿ ಅಸಂವಿಧಾನಿಕ ಪದ ಬಳಕೆ ಮಾಡಿರುವ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರ ವಿರುದ್ಧ ಪ್ರಕರಣ ದಾಖಲಿಸಬೇಕೆಂದು ಬಿಜೆಪಿ ಮುಖಂಡ ದೇವರಾಜೇಗೌಡ ಅವರು ಒತ್ತಾಯಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಪವಿತ್ರ ಸಂವಿಧಾನದ ದೇವಸ್ಥಾನ ಎನಿಸಿರುವ ಸದನದಲ್ಲಿ ಆಡಿರುವ ಪದಗಳು ತಲೆ ತಗ್ಗಿಸುವಂತಹವು. ನಾಲಿಗೆ ಹರಿಬಿಟ್ಟರೂ, ಸಭಾಧ್ಯಕ್ಷರು ನಗುತ್ತಾ ಸುಮ್ಮನೇ ಕುಳಿತಿದ್ದು ಖಂಡನೀಯ. ಈ ಹಿಂದೆ ಸಿ.ಟಿ.ರವಿ ಏನೋ ಮಾತನಾಡಿದರೆಂದು ಬಂಧಿಸಲಾಯಿತು. ಅದೇ ನಿರ್ಧಾರ ಶಿವಲಿಂಗೇಗೌಡರ ವಿಚಾರದಲ್ಲಿ ಏಕಿಲ್ಲ, ಕಾಂಗ್ರೆಸ್ ತತ್ವ-ಸಿದ್ಧಾಂತ ಇದೇನಾ ಎಂದು ಪ್ರಶ್ನಿಸಿದರು.

ಆರ್‌ಎಸ್‌ಎಸ್ ಸಮಾಜಕ್ಕೆ ಸಂಸ್ಕೃತಿ ಕಲಿಸಿದೆ, ಕಲಿಸುತ್ತಿದೆ. ಅದಕ್ಕಾಗಿ ಎಲ್ಲರೂ ಇಷ್ಟ ಪಡುತ್ತಾರೆ. ಇಂತಹ ಸಂಘಟನೆ ಬಗ್ಗೆ ಶಿವಲಿಂಗೇಗೌಡ ಅವರು

### ಬಿಜೆಪಿ ಮುಖಂಡ ದೇವರಾಜೇಗೌಡ ಒತ್ತಾಯ




ಲಘುವಾಗಿ ಮಾತನಾಡಿದ್ದಾರೆ. ಇದೆಲ್ಲವನ್ನೂ ಕೇಳಿಯೂ ಸಭಾಧ್ಯಕ್ಷರು ನಗುತ್ತಾ ಕುಳಿತಿದ್ದು, ಸರಿಯಲ್ಲ. ಶಿವಲಿಂಗೇಗೌಡಸ ಅವರೇನೂ ಸಾಚಾ ಅಲ್ಲ. ಹಿಂದೆ ಅರಸೀಕೆರೆಯಲ್ಲಿ ಸರ್ಕಾರಿ ಪಾರ್ಕ್ ಕಬಳಿಸಿ, ಅದರಿಂದ ಬಚಾವಾಗಲು ಏಲ್ಲ ಮಾಡಿದರೆಂದು ಗೊತ್ತಿದೆ. ಪಾರ್ಕ್ ಕಬಳಿಸಿದ್ದು, ಕಳ್ಳತನ ಅಲ್ವಾ ಸದನದಲ್ಲಿ ಕಳ್ಳ ಅಂದರೆ ತಪ್ಪಾ ಎಂದು ಕೇಳಿದರು.

ಪಾರ್ಕ್ ಜಾಗ ಬದಲಿಗೆ ಬದಲಿ ನಿವೇಶನ ಕೊಡುವ ಸಂಬಂಧ ಹಿಂದೆ ಹೆಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಆಗಿದ್ದಾಗ ಸಚಿವ ಸಂಪುಟ


» ನಾಲ್ಕನೇ ಪುಟದಲ್ಲಿ

# ನಾಳೆ ಕಾಡಿನ ಕೊಳಲು ಕುವೆಂಪು ಗೀತೆಗಳ ನೃತ್ಯ ರೂಪಕ

• ಪ್ರಜೋದಯ ವರದಿ

**ಹಾಸನ:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕ, ಜಿಲ್ಲಾ ಅನುದಾನ ರಹಿತ ಶಾಲೆಗಳ ಆಡಳಿತ ಮಂಡಳಿ ಒಕ್ಕೂಟ, ರೋಟರಿ ಕ್ಲಬ್ ಆಫ್ ಹಾಸನ್ ಟೈಗರ್ ಮತ್ತು ಅಮೋಘ್ ಸುದ್ದಿ ವಾಹಿನಿ ಸಹಯೋಗ ದಲ್ಲಿ ಬೆಂಗಳೂರಿನ ಮನೋಜ್ಞ ನೃತ್ಯಕಲಾ ಕಲಾ ಅಕಾಡೆಮಿಯಿಂದ ಫೆ. 7ರ ಸಂಜೆ 6 ಗಂಟೆಗೆ ನಗರದ ಎಂ.ಜಿ. ರಸ್ತೆಯಲ್ಲಿರುವ ಶ್ರೀ ಆದಿಚುಂಚನಗಿರಿ ಆಂಗ್ಲ ಮಾಧ್ಯಮ ಶಾಲಾ ಆವರಣದಲ್ಲಿ ಕಾಡಿನ ಕೊಳಲು ಕುವೆಂಪು ಗೀತೆಗಳ ನೃತ್ಯ ರೂಪಕ ಹಮ್ಮಿಕೊಳ್ಳಲಾಗಿದೆ.

ಪತ್ರಕರ್ತರ ಸಂಘದ ಎಲ್ಲಾ ಪದಾಧಿಕಾರಿಗಳು, ಸರ್ವ ಸದಸ್ಯರು, ಶಾಲಾ ಶಿಕ್ಷಕರು, ರೋಟರಿ ಕ್ಲಬ್ ಸದಸ್ಯರು, ವಿದ್ಯಾರ್ಥಿ ಹಾಗು ಸಾಹಿತ್ಯಾಸಕ್ತರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಆಯೋಜಕರು ಮನವಿ ಮಾಡಿದ್ದಾರೆ.




CMYK CMYK CMYK CMYK

# ಅಕ್ರಮ ಬಾಂಗ್ಲಾ ವಲಸಿಗರ ಗಡಿಪಾರಿಗೆ ಕ್ರಮ

## ನುಸುಳುಕೋರರ ವಿರುದ್ಧ ಹೈಕೋರ್ಟ್ ತರಾಟೆ ತೆಗೆದುಕೊಂಡ ಹಿನ್ನೆಲೆ: ಗೃಹ ಸಚಿವ ಡಾ.ಪರಮೇಶ್ವರ್ ಮಾಹಿತಿ

• ಪ್ರಜೋದಯ ವರದಿ

**ಬೆಂಗಳೂರು:** ಬಾಂಗ್ಲಾ ದೇಶೀಯರು ಸೇರಿದಂತೆ ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವವರನ್ನು ಪತ್ತೆ ಹಚ್ಚಿ, ಗಡಿಪಾರು ಮಾಡುವ ಕಾರ್ಯಾಚರಣೆಯನ್ನು ಅಭಿಯಾನದ ಮಾದರಿಯಲ್ಲಿ ನಡೆಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಗೃಹ ಸಚಿವ ಡಾ.ಜಿ ಪರಮೇಶ್ವರ್ ಅವರು ತಿಳಿಸಿದ್ದಾರೆ.



ಸುದ್ದಿಗಾರರೊಂದಿಗೆ ಅವರು ಮಾತನಾಡಿ, ರಾಜ್ಯದಲ್ಲಿ 20 ಲಕ್ಷ ಬಾಂಗ್ಲಾ ದೇಶದ ಪ್ರಜೆಗಳು ಅಕ್ರಮವಾಗಿ ನೆಲೆಸಿದ್ದಾರೆ ಎಂದು ಹೈಕೋರ್ಟ್ ತರಾಟೆಗೆ ತೆಗೆದುಕೊಂಡಿದೆ ಎಂಬುದಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ಕೇಂದ್ರ ವಿದೇಶಾಂಗ ಸಚಿವಾಲಯದ ಎಫ್‌ಆರ್‌ಆರ್‌ಒ ಸಂಸ್ಥೆ ಬೆಂಗಳೂರಿನಲ್ಲಿದೆ. ಅವರ ದಾಖಲಾತಿಯಲ್ಲಿ 20 ಲಕ್ಷ ಜನ ಅಕ್ರಮವಾಗಿ ನೆಲೆಸಿರುವ ಮಾಹಿತಿ ಇಲ್ಲ. ಒಂದು ವೇಳೆ ರಿಜಿಸ್ಟರ್ ಪುಸ್ತಕದಲ್ಲಿ ನೋಂದಣಿಯಾಗದೆ ಹೊರಗುಳಿದಿರುವವರನ್ನು ಪತ್ತೆ ಹಚ್ಚಿ ಗಡಿಪಾರು ಮಾಡಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುವುದು. ಈಗಾಗಲೇ ಅಕ್ರಮವಾಗಿ ನೆಲೆಸಿದ್ದ 390 ವಿದೇಶಿ ಪ್ರಜೆಗಳನ್ನು ಗಡಿಪಾರು ಮಾಡಲಾಗಿದೆ ಎಂದರು.

ವಿಧಾನ ಮಂಡಲದ ಅಧಿವೇಶನ ನಡೆಯುವ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಸಚಿವರು, ಶಾಸಕರು ಸಭೆ ನಡೆಸಿದ್ದೇವೆ. ಎಸ್‌ಇಪಿ, ಟಿಎಸ್‌ಪಿ ಯೋಜನೆಯಡಿ ಕಳೆದ ಬಜೆಟ್‌ನಲ್ಲಿ 42 ಸಾವಿರ ಕೋಟಿ ರೂ. ಒದಗಿಸಲಾಗಿದೆ. ಆದರೆ ಅದು ಎಲ್ಲಾ ಇಲಾಖೆಗಳ ನಡುವೆ ಹಂಚಿಕೆಯಾಗಿದೆ. ಯಾವ ಇಲಾಖೆಯಲ್ಲಿ ಎಷ್ಟು ಖರ್ಚಾಗಿದೆ ಎಂಬ ನಿಖರ ಮಾಹಿತಿ ಸಿಗುತ್ತಿಲ್ಲ. ಫಲಾನುಭವಿಗಳಿಗೂ ಸೌಲಭ್ಯ ದೊರೆಯುತ್ತಿಲ್ಲ ಎಂಬ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ.

ಈ ಮೊದಲು ಎಸ್‌ಇಪಿ, ಟಿಎಸ್‌ಪಿ ಅನುದಾನವನ್ನು ಸಮಾಜ ಕಲ್ಯಾಣ ಇಲಾಖೆಗೆ ನೀಡಲಾಗುತ್ತಿತ್ತು. ಅಲ್ಲಿಂದ ಕಾರ್ಯಕ್ರಮ ರೂಪಿಸಲಾಗುತ್ತಿತ್ತು. ಗಂಗಾ ಕಲ್ಯಾಣ, ಸ್ವಯಂ ಉದ್ಯೋಗ, ವಾಹನ ಖರೀದಿ ಸೇರಿದಂತೆ ವಿವಿಧ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿತ್ತು. ಅಂತಹ ಸಂದರ್ಭದಲ್ಲಿ ಫಲಾನುಭವಿಗಳಿಗೂ ನೇರವಾಗಿ ಸೌಲಭ್ಯ ಸಿಗುತ್ತಿತ್ತು. ಈಗ ಮತ್ತೆ ಮೊದಲಿನ ವ್ಯವಸ್ಥೆಯಂತೆ ಸಮಾಜ ಕಲ್ಯಾಣ ಇಲಾಖೆಗೆ ಅನುದಾನವನ್ನು ಒದಗಿಸಬೇಕು. ಅಲ್ಲಿಂದ ಹಂಚಿಕೆ ಮಾಡಬೇಕು ಎಂಬುದು ಎಲ್ಲಾ ಜನಪ್ರತಿನಿಧಿಗಳ ಅಭಿಪ್ರಾಯವಾಗಿದೆ. ಅದನ್ನು ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಲು ಸಭೆಯಲ್ಲಿ ನಿರ್ಧರಿಸಲಾಗಿದೆ. ಗ್ಯಾರಂಟಿ ಯೋಜನೆಗಳಿಗೆ ಎಸ್‌ಇಪಿ, ಟಿಎಸ್‌ಪಿ ಹಣ ಬಳಕೆಯಾಗುವುದನ್ನು ತಪ್ಪಿಸಲು ಇದು ಉತ್ತಮ ಮಾರ್ಗವಾಗಿದೆ ಎಂದು ಅವರು ಹೇಳಿದರು.

ನಮ್ಮ ಮೆಟ್ರೋ ಸಂಸ್ಥೆ ಸ್ವಾಯತ್ತವಾಗಿದೆ. ಅದರಲ್ಲೂ ಮೆಟ್ರೋ ಸಂಸ್ಥೆಯಲ್ಲಿ ಕೇಂದ್ರ ಸರ್ಕಾರದ ಪಾಲು ಇದೆ. ಮೆಟ್ರೋ ರೈಲು ನಿರ್ವಹಣೆಗಾಗಿ ರಚಿಸಲಾಗಿರುವ ಸಿಎಂಡಿ ಕೇಂದ್ರ ಸರ್ಕಾರದ ನಿರ್ದೇಶನದಂತೆ ಪ್ರಯಾಣ ದರ ಪರಿಷ್ಕರಣೆ ಮಾಡಿರಬಹುದು ಎಂದರು.

### ಸಾಕ್ಷ್ಯಾಧಾರ ಒದಗಿಸಲು ವಿಪಕ್ಷಗಳು ವಿಫಲ

ಸಚಿವ ಆರ್.ಬಿ.ತಿಮಾಪುರ್ ವಿರುದ್ಧ ಕೇಳಿ ಬಂದಿರುವ ಆರೋಪಕ್ಕೆ ಸೂಕ್ತ ಸಾಕ್ಷ್ಯಾಧಾರ ಒದಗಿಸಲು ವಿರೋಧ ಪಕ್ಷಗಳು ವಿಫಲವಾಗಿವೆ. ಯಾರೋ ಮಾತನಾಡಿರುವ ಆಡಿಯೋವನ್ನು ಸಿಡಿಯಲ್ಲಿ ತಂದು ಪ್ರಸ್ತಾಪ ಮಾಡಿದರೆ ಒಪ್ಪಲು ಸಾಧ್ಯವಿಲ್ಲ. ಸಚಿವ ಆರ್.ಬಿ.ತಿಮಾಪುರ್, ನಾನು ನೇರವಾಗಿ ಹಣ ಪಡೆದಿರುವುದು ಅಥವಾ ನನ್ನ ಕಚೇರಿಯಲ್ಲಿ ಲಂಚ ಪಡೆಯುವ ಮಾತುಕತೆಯಾಗಿದ್ದರೆ ಅದನ್ನು ಸಾಬೀತುಪಡಿಸಿ. ನಾನು ರಾಜೀನಾಮೆ ನೀಡಲು ಸಿದ್ಧನಿದ್ದೇನೆ. ಯಾರೋ ಮಾತನಾಡಿಕೊಂಡಿದ್ದರೆ ಅದರಲ್ಲಿ ನನ್ನ ಪಾತ್ರ ಏನಿರುತ್ತದೆ? ನಾನ್ಯೇಗೆ ಹೊಣೆಯಾಗುತ್ತೇನೆ ಎಂದು ತಿಮಾಪುರ ಪ್ರಶ್ನಿಸಿದ್ದಾರೆ. ವಿರೋಧ ಪಕ್ಷದವರು ಇದೇ ರೀತಿ ಪ್ರತಿದಿನ ಒಬ್ಬೊಬ್ಬ ಸಚಿವರ ವಿರುದ್ಧ ಸಿಡಿ ತರುತ್ತಾರೆ. ಅದನ್ನು ಒಪ್ಪಬೇಕಾ? ಎಂದು ಪ್ರಶ್ನಿಸಿದರು.

# ರಾಜ್ಯಮಟ್ಟದ ಜಿಮ್ನಾಸ್ಟಿಕ್ ಕ್ರೀಡಾಕೂಟ: ಹಾಸನ ಜಿಲ್ಲೆಯ ಕ್ರೀಡಾಪಟುಗಳ ಸಾಧನೆ

• ಪ್ರಜೋದಯ ವರದಿ

**ಹಾಸನ:** ಜನವರಿ 19 ರಿಂದ 22ರ ವರೆಗೆ ತುಮಕೂರಿನ ಮಹಾತ್ಮಗಾಂಧಿ ಜಿಮ್ನಾಸ್ಟಿಕ್ಸ್ ಕ್ರೀಡಾಂಗಣದಲ್ಲಿ ನಡೆದ ರಾಜ್ಯ ಮಟ್ಟದ ಕ್ರೀಡಾಕೂಟದಲ್ಲಿ ಹಾಸನ ಜಿಲ್ಲೆಯ ಕ್ರೀಡಾಪಟುಗಳು ಗಮನಾರ್ಹ ಸಾಧನೆ ಮಾಡಿದ್ದಾರೆ.



ಏರೋಬಿಕ್ ಜಿಮ್ನಾಸ್ಟಿಕ್ ವೈಯಕ್ತಿಕ ಮಹಿಳಾ ವಿಭಾಗದಲ್ಲಿ ಹೆಚ್.ಆರ್. ಹರ್ಷಿನಿ ಕಂಚಿನ ಪದಕ ಗೆದ್ದಿದ್ದಾರೆ. ಇದೇ ವೇಳೆ, ಏರೋಬಿಕ್ ಜಿಮ್ನಾಸ್ಟಿಕ್ ಮಿಶ್ರ ಜೋಡಿ ವಿಭಾಗದಲ್ಲಿ ಹೆಚ್.ಆರ್. ಹರ್ಷಿನಿ ಮತ್ತು ಡಿ.ಎಂ. ಕೀರ್ತಿಕುಮಾರ್, ಏರೋಬಿಕ್ ಜಿಮ್ನಾಸ್ಟಿಕ್ಸ್ ಟ್ರಿಯೋ ವಿಭಾಗದಲ್ಲಿ ಹೆಚ್.ಆರ್.ಹರ್ಷಿನಿ, ಡಿ.ಎಂ.ಕೀರ್ತಿಕುಮಾರ್ ಮತ್ತು ಎಂ.ಆರ್. ವರುಣ್, ಅಕ್ರೋಬ್ಯಾಟಿಕ್ ಜಿಮ್ನಾಸ್ಟಿಕ್ಸ್ ಮಿಶ್ರ ಜೋಡಿ ವಿಭಾಗದಲ್ಲಿ ಹೆಚ್.ಆರ್. ಹರ್ಷಿನಿ ಮತ್ತು ಡಿ.ಎಂ. ಕೀರ್ತಿ ಕುಮಾರ್ ಕಂಚಿನ ಪದಕಗಳನ್ನು ತಮ್ಮದಾಗಿಸಿಕೊಂಡಿದ್ದಾರೆ.

ಒಟ್ಟಾರೆ ಈ ತಂಡವು 8 ಕಂಚಿನ ಪದಕಗಳನ್ನು ಪಡೆದು ಜಿಲ್ಲೆಗೆ ಹೆಮ್ಮೆಯನ್ನು ತಂದಿದೆ. ಈ ಕ್ರೀಡಾಪಟುಗಳು ಹಾಸನದ ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ನಿರಂತರವಾಗಿ ಅಭ್ಯಾಸ ನಡೆಸುತ್ತಿದ್ದಾರೆ.

ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಆನಂದ್ ಮೂರ್ತಿ ಅವರು ಪದಕ ವಿಜೇತರನ್ನು ಅಭಿನಂದಿಸಿ, ಮುಂದಿನ ದಿನಗಳಲ್ಲಿ ಇನ್ನಷ್ಟು ಸಾಧನೆ ಮಾಡುವಂತೆ ಅವರು ಶುಭ ಹಾರೈಸಿದರು.

# ಗುಣಮಟ್ಟ ಕಾಯ್ದುಕೊಂಡು ಕಾಮಗಾರಿ ನಡೆಸಿ

• ಪ್ರಜೋದಯ ವರದಿ

**ಸಕಲೇಶಪುರ:** ಕಾಮಗಾರಿ ಗುಣಮಟ್ಟವನ್ನು ಕಾಪಾಡಿಕೊಂಡು ನಿಗದಿತ ಅವಧಿಯೊಳಗೆ ರಸ್ತೆ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಬೇಕೆಂದು ಶಾಸಕ ಸಿಮೆಂಟ್ ಮಂಜು ಅಧಿಕಾರಿಗಳಿಗೆ ಸೂಚನೆ ನೀಡಿದರು.



ತಾಲ್ಲೂಕಿನ ಬಾಳ್ಳುಪೇಟೆಯಲ್ಲಿ ನಡೆಯುತ್ತಿರುವ ನೂತನ ರಸ್ತೆ ಕಾಮಗಾರಿಯನ್ನು ವೀಕ್ಷಿಸಿ ಮಾತನಾಡಿದ ಅವರು, ತೀರ ಹದಗೆಟ್ಟು ಸಾರ್ವಜನಿಕರ ಸಂಚಾರಕ್ಕೆ ಅಸಾಧ್ಯವಾಗಿದ್ದ ರಾಜ್ಯ ಹೆದ್ದಾರಿ112ರ ಬೇಲೂರು ಸೋಮವಾರಪೇಟೆ ರಸ್ತೆಯನ್ನು ಬಾಳ್ಳುಪೇಟೆಯಿಂದ ಜಮ್ಮನಹಳ್ಳಿ ತನಕ ಸುಮಾರು 3 ಕಿ.ಮೀ ಉದ್ದದಲ್ಲಿ 10 ಕೋಟಿ ರೂ. ಅನುದಾನದಲ್ಲಿ ನೂತನವಾಗಿ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಯೋಜನೆಯಡಿ 7 ಮೀಟರ್ ಅಗಲದ ದ್ವಿಪಥ ರಸ್ತೆ ನಿರ್ಮಾಣ, 5 ಮೋರಿಗಳ ನಿರ್ಮಾಣ, ಬಾಳ್ಳುಪೇಟೆ ಪಟ್ಟಣ ವ್ಯಾಪ್ತಿಯಲ್ಲಿ ಮೋರಿ ಹಾಗೂ ಆಯ್ದ ಭಾಗಗಳಲ್ಲಿ ಚರಂಡಿ ನಿರ್ಮಾಣ, ರಸ್ತೆ ಸುರಕ್ಷತಾ ಸಂಬಂಧಿತ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಕಾಮಗಾರಿ ವೀಕ್ಷಣೆ ವೇಳೆ ಕೆಲವು ಸ್ಥಳಗಳಲ್ಲಿ ಗುಣಮಟ್ಟದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಶಾಸಕ ಸಿಮೆಂಟ್ ಮಂಜು, ಸಂಬಂಧಪಟ್ಟ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು ಗುಣಮಟ್ಟದ ಕಾಮಗಾರಿ ನಡೆಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಸರ್ಕಾರದ ಅನುದಾನ ಸದ್ಬಳಕೆಯಾಗುವಂತೆ ಎಲ್ಲರೂ ಹೊಣೆಗಾರಿಕೆಯಿಂದ ಕಾರ್ಯ ನಿರ್ವಹಿಸಬೇಕೆಂದು ಗುತ್ತಿಗೆದಾರರು ಹಾಗೂ ಅಧಿಕಾರಿಗಳಿಗೆ ತಿಳಿಸಿದರು.

ಇಲಾಖೆಗಳ ನಡುವೆ ಸಮನ್ವಯ ಕೊರತೆ ಕಂಡುಬಂದರೆ ಕಾಮಗಾರಿ ವಿಳಂಬವಾಗುವ ಸಾಧ್ಯತೆ ಇದೆ ಎಂದು ಅಭಿಪ್ರಾಯಪಟ್ಟ ಅವರು, ಲೋಕೋಪಯೋಗಿ ಇಲಾಖೆ ಹಾಗೂ ಚೆಸ್ಕಾಂ ಇಲಾಖೆ ಅಧಿಕಾರಿಗಳು ಪರಸ್ಪರ ಸಮನ್ವಯ ಸಾಧಿಸಿಕೊಂಡು ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯಪಾಲಕ ಅಭಿಯಂತರ ಮುರುಗೇಶ್, ಚೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ಹರೀಶ್, ಗುತ್ತಿಗೆದಾರರು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಸದನದಲ್ಲಿ ನಾಲಿಗೆ ಹರಿಬಿಟ್ಟ ಕೆ.ಎಂ.ಶಿವಲಿಂಗೇಗೌಡ

## ರಾಜ್ಯಮಟ್ಟದಲ್ಲಿ ಅರಸೀಕೆರೆ ಕ್ಷೇತ್ರದ ಮಾನ ಹರಾಜು ಹಾಕಿದ ಶಾಸಕ: ಆಕ್ರೋಶ

• ಪ್ರಜೋದಯ ವರದಿ

**ಅರಸೀಕೆರೆ:** ಸಂಸ್ಕೃತಿ ಇಲ್ಲದಂತೆ ಸದನದಲ್ಲಿ ನಾಲಿಗೆಯನ್ನು ಹರಿಬಿಟ್ಟಿರುವ ಶಾಸಕ ಶಿವಲಿಂಗೇಗೌಡ ಕ್ಷೇತ್ರದ ಮತದಾರರ ಮಾನ- ಮರ್ಯಾದೆಯನ್ನು ರಾಜ್ಯಮಟ್ಟದಲ್ಲಿ ಹರಾಜು ಹಾಕಿದ್ದಾರೆ ಎಂದು ಬಿಜೆಪಿ ಮುಖಂಡರಾದ ಜಿವಿಟಿ ಬಸವರಾಜ್ ಮತ್ತು ಎನ್.ಡಿ. ಪ್ರಸಾದ್ ಆಕ್ರೋಶ ವ್ಯಕ್ತಪಡಿಸಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸದನದ ಗಾಂಭೀರ್ಯತೆಯನ್ನು ಮರೆತು ಸಂತೆಯಲ್ಲಿ ಮಾತನಾಡುವವರಂತೆ ಮತ್ತೊಂದು ಪಕ್ಷದ ಚುನಾಯಿತ ಶಾಸಕರನ್ನು ಮತ್ತು ಅವರ ಕುಟುಂಬದವರ ಹೆಸರನ್ನು ಹೇಳಿಕೊಂಡು ನಾಲಿಗೆಯನ್ನು ಹರಿಬಿಟ್ಟ ಶಿವಲಿಂಗೇಗೌಡರ ಮತ್ತೊಂದು ಮುಖ ಬುಧವಾರ ಸದನದಲ್ಲಿ ಅನಾವರಣವಾಗಿದೆ. ಅದೂ ಅಲ್ಲದೆ ಆರ್‌ಎಸ್‌ಎಸ್ ಬಗ್ಗೆ ಅವರು ಹಾಡಿದ ಮಾತುಗಳು ಅತ್ಯಂತ ಖಂಡನಾರ್ಹವಾಗಿದೆ ಎಂದು ಅವರು ವಾಗ್ದಾಳಿ ಮಾಡಿದರು.

ನಮ್ಮ ಬಿಜೆಪಿ ಸರ್ಕಾರ ಇದ್ದಾಗಲೇ ಇವರಿಗೆ ಸದನ ಶೂರ ಪ್ರಶಸ್ತಿ ನೀಡಲಾಗಿತ್ತು. ಆದರೆ ಇವರು ಸದನ ಶೂರರಲ್ಲ ಸದನ ಕ್ರೂರರು ಎಂದು ಲೇವಡಿ ಮಾಡಿದ ಬಿಜೆಪಿ ನಾಯಕರು, ಶಿವಲಿಂಗೇಗೌಡರು ಮಂತ್ರಿ ಆಗಲು ಕಾಂಗ್ರೆಸ್ ಹೈಕಮಾಂಡನ್ನು ಓಲೈಸಲು ಈ ರೀತಿ ನಡೆದುಕೊಳ್ಳುತ್ತಿದ್ದಾರೆ ಎಂದು ಕಿಡಿಕಾರಿದರು.

ಆರ್‌ಎಸ್‌ಎಸ್ ಹಾಗೂ ಬಿಜೆಪಿ ಶಾಸಕರ ವಿರುದ್ಧ ಲಘುವಾಗಿ ಮಾತನಾಡಿರುವ ಶಿವಲಿಂಗೇಗೌಡ ಅವರು ಕೂಡಲೇ ಕ್ಷಮೆಯಾಚನೆ ಮಾಡಬೇಕು. ಇಲ್ಲದೆ ಹೋದರೆ ಇವರ ವಿರುದ್ಧ ಬೃಹತ್ ಪ್ರತಿಭಟನೆ ಮಾಡಲಾಗುವುದು ಎಂದು ಬಿಜೆಪಿ ನಾಯಕರು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಹಿರಿಯ ಮುಖಂಡರ ದುಮ್ಮೇನಹಳ್ಳಿ ಗಂಗಾಧರ್, ಬಿಜೆಪಿ ಗ್ರಾಮೀಣ ಮಂಡಲದ ಅಧ್ಯಕ್ಷ ಯತೀಶ್, ನಗರ ಮಂಡಲದ ಅಧ್ಯಕ್ಷ ಅವಿನಾಶ್ ನಾಯ್ಡು, ಬಾಣಾವರ ಜಯಣ್ಣ, ಬಿಜೆಪಿ ನಗರ ಮಂಡಲ ಮಾಜಿ ಅಧ್ಯಕ್ಷ ಪುರುಷೋತ್ತಮ್, ಗ್ರಾಮೀಣ ಮಂಡಲದ ಮಾಜಿ ಅಧ್ಯಕ್ಷ ರಮೇಶ್, ಶಿಲ್ಪಾ ಸತೀಶ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

### (ಗುರುವಾರದ ಕಾಫಿ ಧಾರಣೆ: 50 ಕೆಜಿಗೆ)

ಅರೆಬಿಕಾ ಪಾರ್ಚ್‌ಮೆಂಟ್- 24,500, ಅರೆಬಿಕಾ ಚೆರಿ-13,000,
ರೊಬಸ್ಟಾ ಪಾರ್ಚ್‌ಮೆಂಟ್-18,000, ರೊಬಸ್ಟಾ ಚೆರಿ - 10,000

# ಭಾರತೀಯ ವಾಯುಪಡೆಗೆ 5 ತೇಜಸ್ ಜೆಟ್‌ಗಳು

• ಪ್ರಜೋದಯ ವರದಿ

**ಬೆಂಗಳೂರು:** ಐದು ತೇಜಸ್ ಲಘು ಯುದ್ಧ ವಿಮಾನಗಳು ಭಾರತೀಯ ವಾಯುಪಡೆಗೆ ಹಸ್ತಾಂತರಿಸಲು ಸಂಪೂರ್ಣವಾಗಿ ಸಿದ್ಧವಾಗಿವೆ ಎಂದು ಸರ್ಕಾರಿ ಸ್ವಾಮ್ಯದ ಏರೋಸ್ಪೇಸ್ ದೈತ್ಯ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಗುರುವಾರ ಹೇಳಿದೆ.

ಫೆಬ್ರವರಿ 2021 ರಲ್ಲಿ, ರಕ್ಷಣಾ ಸಚಿವಾಲಯವು ಗಾಗಿ 83 ತೇಜಸ್ -1 ಜೆಟ್‌ಗಳ ಖರೀದಿಗಾಗಿ ಜೊತೆ 48,000 ಕೋಟಿ ರೂ.ಗಳ ಒಪ್ಪಂದ ಮಾಡಿಕೊಂಡಿತ್ತು.

ಜೆಟ್‌ಗಳಿಗೆ ಶಕ್ತಿ ತುಂಬಲು ಏರೋಸ್ಪೇಸ್ ತನ್ನ ಏರೋ ಎಂಜಿನ್‌ಗಳನ್ನು ಪೂರೈಸಲು ಹಲವಾರು ಗಡುವುಗಳನ್ನು ತಪ್ಪಿಸಿಕೊಂಡ ಕಾರಣ ಜೆಟ್‌ಗಳ ಡೆಲಿವರಿ ವಿಳಂಬವಾಗಿದೆ.

ಒಪ್ಪಿಗೆ ನೀಡಿದ ವಿಶೇಷತೆಗಳಿಗೆ ಅನುಗುಣವಾಗಿ ಅದೇ ಸಾಮರ್ಥ್ಯವನ್ನು ಒಳಗೊಂಡಂತೆ ಐದು ವಿಮಾನಗಳು ಡೆಲಿವರಿಗೆ ಸಂಪೂರ್ಣವಾಗಿ ಸಿದ್ಧವಾಗಿವೆ ಎಂದು ದೃಢಪಡಿಸುತ್ತದೆ ಎಂದು ಏರೋಸ್ಪೇಸ್ ಪ್ರಮುಖ ವಕ್ತಾರರು ತಿಳಿಸಿದ್ದಾರೆ.

ಹೆಚ್ಚುವರಿ ಒಂಬತ್ತು ವಿಮಾನಗಳನ್ನು ಈಗಾಗಲೇ ನಿರ್ಮಿಸಲಾಗಿದೆ ಮತ್ತು ಹಾರಿಸಲಾಗಿದೆ. ಯಿಂದ ಎಂಜಿನ್‌ಗಳನ್ನು ಸ್ವೀಕರಿಸಿದ ನಂತರ, ಈ ವಿಮಾನಗಳನ್ನು ಡೆಲಿವರಿಗೆ ಸಿದ್ಧಗೊಳಿಸಲಾಗುತ್ತದೆ ಎಂದು ಅಧಿಕಾರಿ ಹೇಳಿದ್ದಾರೆ.

# ಅಗ್ನಿಶಾಮಕ ದಳದಿಂದ ಮಕ್ಕಳಿಗೆ ಪ್ರಾತ್ಯಕ್ಷಿಕೆ

• ಪ್ರಜೋದಯ ವರದಿ

**ಸಕಲೇಶಪುರ:** ಬೇಸಿಗೆ ಕಾಲದಲ್ಲಿ ಅರಣ್ಯ ಹಾಗೂ ವನ್ಯಜೀವಿಗಳಿಗೆ ಸಂಭವಿಸಬಹುದಾದ ಹಾನಿ, ಅರಣ್ಯ ಬೆಂಕಿ ತಡೆಗಟ್ಟುವ ಕ್ರಮಗಳು ಹಾಗೂ ಬೆಂಕಿ ಕಾಣಿಸಿಕೊಂಡಲ್ಲಿ ಕೈಗೊಳ್ಳಬೇಕಾದ ತುರ್ತು ಕ್ರಮಗಳ ಕುರಿತು ಅರಣ್ಯ ಇಲಾಖೆ ಮತ್ತು ಅಗ್ನಿಶಾಮಕ ದಳದ ಸಹಯೋಗದಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಪ್ರಾತ್ಯಕ್ಷಿಕೆಯನ್ನು ಹಮ್ಮಿಕೊಳ್ಳಲಾಗಿತ್ತು.



ತಾಲ್ಲೂಕಿನ ಮಾರನಹಳ್ಳಿಯ ಪ್ರೌಢಶಾಲಾ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿಗಳು ಪಶ್ಚಿಮ ಘಟ್ಟಗಳ ಅತಿ ವಿಸ್ತಾರ ಪ್ರದೇಶಗಳನ್ನು ಒಳಗೊಂಡಿರುವ ಸಕಲೇಶಪುರ ಪ್ರಾದೇಶಿಕ ಅರಣ್ಯ ವಲಯದಲ್ಲಿ ಬೇಸಿಗೆಯ ಅವಧಿಯಲ್ಲಿ ಅರಣ್ಯ ಬೆಂಕಿ ಪ್ರಕರಣಗಳ ಸಂಭವನೀಯತೆ ಹೆಚ್ಚಿರುವುದರಿಂದ ಸಾರ್ವಜನಿಕರು, ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಎಚ್ಚರಿಕೆ ವಹಿಸಬೇಕೆಂದು ಮನವಿ ಮಾಡಿದರು. ಯಾವುದೇ ಕಾರಣಕ್ಕೂ ಅರಣ್ಯ ಹಾಗೂ ಹಿಡುವಳಿ ಜಾಗಗಳಲ್ಲಿ ಬೆಂಕಿ ಹಾಕಬಾರದು ಎಂದು ಕಟ್ಟುನಿಟ್ಟಾಗಿ ಸೂಚಿಸಿದರು.

ವಲಯ ಅರಣ್ಯಾಧಿಕಾರಿಗಳ ಕಚೇರಿ, ಸಕಲೇಶಪುರ ವಲಯದಿಂದ ಹೊರಡಿಸಿರುವ ಪ್ರಕಟಣೆಯ ಪ್ರಕಾರ ಜನವರಿಯಿಂದ ಮೇ ತಿಂಗಳವರೆಗೆ ತಾಪಮಾನ ಹೆಚ್ಚಾಗುವ ಕಾರಣ ಅರಣ್ಯ ಪ್ರದೇಶಗಳಲ್ಲಿ ಬೆಂಕಿ ಹರಡುವ ಅಪಾಯ ಹೆಚ್ಚಿರುತ್ತದೆ. ಈ ಹಿನ್ನೆಲೆಯಲ್ಲಿ ಅರಣ್ಯ ಸಂಪತ್ತಿನ ರಕ್ಷಣೆಗೆ ಸಾರ್ವಜನಿಕರ ಸಹಕಾರ ಅತ್ಯಂತ ಅಗತ್ಯವಾಗಿದ್ದು, ಎಲ್ಲರೂ ಜವಾಬ್ದಾರಿಯಿಂದ ವರ್ತಿಸಬೇಕೆಂದು ತಿಳಿಸಲಾಯಿತು.

### ಇಂದಿನಿಂದ ದೇವಿರಮ್ಮ, ವೀರಭದ್ರಸ್ವಾಮಿ ಜಾತ್ರೆ

**ಆಲೂರು:** ತಾಲ್ಲೂಕಿನ ಕಣತೂರು ಗ್ರಾಮದಲ್ಲಿ ಶ್ರೀ ದೇವಿರಮ್ಮ ಹಾಗು ಶ್ರೀ ವೀರಭದ್ರ ಸ್ವಾಮಿ ಜಾತ್ರಾ ಮಹೋತ್ಸವ ಫೆ.6ರಿಂದ ಮೂರು ದಿನಗಳ ಕಾಲ ಜರುಗಲಿದೆ.

ಶುಕ್ರವಾರ ರಾತ್ರಿಯಿಂದಲೇ ಪೂಜಾ ಕಾರ್ಯಗಳು ಆರಂಭಗೊಳ್ಳಲಿವೆ. ಶನಿವಾರ ಬೆಳಗ್ಗಿನ ಜಾವದಿಂದ ಉತ್ಸವಕ್ಕೆ ಚಾಲನೆ ದೊರೆಯಲಿದೆ. ಹೊಲ್ಲಹಳ್ಳಿ ಗ್ರಾಮದಲ್ಲಿ ನೆಲಸಿರುವ ದೇವಿರಮ್ಮ ದೇವಿಯ ತಂಗಿಯರಾದ ಮುದಿಯಮ್ಮ, ಕೆಂಪಮ್ಮ ಹಾಗು ಪಾಲಿಕೆಯಮ್ಮ ಅವರ ಆಗಮನದೊಂದಿಗೆ ಜಾತ್ರಾ ಸಂಭ್ರಮ ಆರಂಭವಾಗಲಿದೆ. ಬೆಳಿಗ್ಗೆ 7 ಗಂಟೆಗೆ ಕೆಂಡೋತ್ಸವ ನೆರವೇರಲಿದ್ದು, ದೇವರಿಗೆ ನೈವೇದ್ಯ ಅರ್ಪಿಸಿ ಮಹಾಮಂಗಳಾರತಿ ನಡೆಯಲಿದೆ. ಮಧ್ಯಾಹ್ನ 3 ಗಂಟೆಗೆ ಐತಿಹಾಸಿಕ ಸಿಡಿ ಉತ್ಸವ, ಭಕ್ತರಿಗೆ ಅನ್ನ ಸಂತರ್ಪಣೆ ಜರುಗಲಿದೆ.

# ಭೀಮ್ ಆರ್ಮಿ ಜಾತಿಗೆ ಸೀಮಿತವಲ್ಲ



• ಪ್ರಜೋದಯ ವರದಿ

**ಹೊಳೆನರಸೀಪುರ:** ಬಹುಜನ ಹಿತಾಯ ಎಂಬ ನೀತಿ ಅನುಸರಿಸಿರುವ ರಾಷ್ಟ್ರೀಯ ಭೀಮ್ ಆರ್ಮಿ ಸಂಘಟನೆ ಕೇವಲ ಒಂದು ಜಾತಿಗೆ ಸೀಮಿತವಾಗಿಲ್ಲ ಎಂದು ಜಿಲ್ಲಾಧ್ಯಕ್ಷ ಪ್ರಸನ್ನ ಹೊಸೂರು ಅವರು ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಯಾವುದೇ ವರ್ಗದವರಿಗೆ ಅನ್ಯಾಯವಾದಾಗ ಭೀಮ್ ಆರ್ಮಿ ಸಂಘಟನೆಯ ಸಹಾಯ ಬೇಡಿದರೆ ಅಂತಹವರ ಪರ ಧ್ವನಿಯಾಗಲಿದೆ. ಸಂಘಟನೆಯ ಸಂಸ್ಥಾಪಕ ಚಂದ್ರಶೇಖರ್ ಆಜಾದ್ ರಾವಣ್ ಇವರ ಘೋಷವಾಕ್ಯದೊಂದಿಗೆ ಭಾರತ್ ಏಕತಾ ಮಿಷನ್ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದೇವೆ. ಇದೀಗ ಹೊಳೆನರಸೀಪುರ ತಾಲೂಕಿನಲ್ಲೂ ಸಂಘಟನಾ ಘಟಕ ಸ್ಥಾಪಿಸಲಾಗಿದೆ. ಸಮಾಜಿಕ ಕಳಕಳಿ ಉಳ್ಳ ಯಾವುದೇ ವರ್ಗದವರು ಸದಸ್ಯರಾಗ ಬಯಸಿದರೆ ನಾವು ಸ್ವಾಗತಿಸುತ್ತೇವೆ ಎಂದು ತಿಳಿಸಿದರು.

ಅಧ್ಯಕ್ಷರಾಗಿ ಶ್ರೀನಿವಾಸ್ ಉಲಿವಾಲ, ಉಪಾಧ್ಯಕ್ಷ ಬಲರಾಮ್ ಜೋಗಿಕೊಪ್ಪಲು, ಕಾಯಾಧ್ಯಕ್ಷರಾಗಿ ಆನೆಕನ್ನಂಬಾಡಿ ರವಿ ಹಾಗೂ ಪ್ರಧಾನ ಕಾರ್ಯದರ್ಶಿ ರಂಗಸ್ವಾಮಿ ಸೇರಿದಂತೆ ಘಟಕ ಸ್ಥಾಪಿಸಲಾಗಿದೆ ಎಂದರು.

# ಸ್ವರ್ಣ ಗೌರಮ್ಮ ದೇವಿ ಸನ್ನಿಧಿ ಭಕ್ತರ ಪಾಲಿನ ಸುಕ್ಷೇತ್ರ

• ಪ್ರಜೋದಯ ವರದಿ

**ಅರಸೀಕೆರೆ:** ತಾಲೂಕಿನ ಸುಕ್ಷೇತ್ರ ಮಾಡಾಳು ಗ್ರಾಮದ ಇತಿಹಾಸ ಪ್ರಸಿದ್ಧ ಮೂಲಸ್ಥಾನ ಸ್ವರ್ಣ ಗೌರಮ್ಮ ದೇವಿ ಸನ್ನಿಧಿಯು ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ ಸುಕ್ಷೇತ್ರ ಎಂದು ಹಾರನಹಳ್ಳಿ ಕೋಡಿಮಠದ ಜಗದ್ಗುರು ಡಾ. ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಅವರು ಹೇಳಿದರು.

### ಇಷ್ಟಾರ್ಥಗಳನ್ನು ಈಡೇರಿಸುವ ದೇವತೆ



ಕೋಡಿಮಠ ಮಹಾ ಸಂಸ್ಥಾನದ ವತಿಯಿಂದ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ದೇವಾಲಯದ ಕಾಮಗಾರಿಯನ್ನು ಖುದ್ದು ವೀಕ್ಷಿಸಿ ನಂತರ ಅಲ್ಲಿ ಸೇರಿದ್ದ ಭಕ್ತರನ್ನು ಉದ್ದೇಶಿಸಿ ಮಾತನಾಡಿದ ಸ್ವಾಮೀಜಿ ಅವರು, ಮುಂದಿನ ಶ್ರಾವಣ ಪಂಚಮಿ ಯಂದು ನೂತನ ದೇವಾಲಯ ಲೋಕಾರ್ಪಣೆ ನಿಗಧಿಪಡಿಸಿದ್ದು ಆ ವೇಳೆಗೆ ಮೊದಲೇ ದೇವಾಲಯ ಕಾಮಗಾರಿಯನ್ನು ಪೂರ್ಣಗೊಳಿಸಿ ಕೊಡಬೇಕೆಂದು ಕಾಮಗಾರಿ ಗುತ್ತಿಗೆದಾರ ಮುರುಡೇಶ್ವರದ ವಿನಾಯಕ್‌ಗೆ ಸೂಚಿಸಿದರು.

ದೇವಾಲಯದ ಕಾಮಗಾರಿಗೆ ಎಲ್ಲಾ ರೀತಿಯ ಸಹಕಾರವನ್ನು ಶ್ರೀ ಮಠದ ವತಿಯಿಂದ ನೀಡಲಿದ್ದು, ಶ್ರೀ ಸ್ವರ್ಣ ಗೌರಮ್ಮ ದೇವಿಗೆ ಕೋಡಿ ಮಠದ ಮಹಾ ತಪಸ್ವಿ ಶಿವಲಿಂಗ ಸ್ವಾಮೀಜಿಯವರು ಕೋಟಿ ಜಪ ಮಾಡಿ ಸಿದ್ದಿಸಿದ ಮೂಗುತಿಯನ್ನು ಆಶೀರ್ವದಿಸಿ ನೀಡಿದ್ದು ಆ ಮೂಗತ್ತಿಯ ದರ್ಶನದಿಂದ ಭಕ್ತರ ಸಕಲ ಇಷ್ಟಾರ್ಥಗಳು ಈಡೇರುತ್ತಿರುವುದರಿಂದ ಈ ಕ್ಷೇತ್ರ ಇತಿಹಾಸ ಪ್ರಸಿದ್ಧಿ ಹೊಂದಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಗೌರಮ್ಮದೇವಿ ಸೇವಾ ಸಮಿತಿ ಅಧ್ಯಕ್ಷ ಎಂ.ಎಸ್. ನಟರಾಜ್ ಗೌರವಾಧ್ಯಕ್ಷ ಎಸ್. ಮಲ್ಲಿಕಾರ್ಜುನಪ್ಪ ಮುಖಂಡರಾದ ಎಂ.ಸಿ.ನಟರಾಜ್, ಮಾಡಾಳು ಶಿವಲಿಂಗಪ್ಪ, ದುಮ್ಮೇನಹಳ್ಳಿ ಶಂಕ್ರಪ್ಪ, ಎಂ.ಬಿ.ಅಶೋಕ್ ಹೊಸಳ್ಳಿ ಶಿವಣ್ಣ ಎಂ.ಟಿ.ಲೋಕೇಶ್ ಎಂ.ಡಿ.ಸೋಮಶೇಖರ್, ಚಂದ್ರಪ್ಪ, ದಾಸಪ್ಪ, ಕಟ್ಟಿ ತಿಮ್ಮಯ್ಯ, ಲೋಕೇಶ್, ರಂಗನಾಥ್ ಮುಂತಾದವರಿದ್ದರು.

# ದೇವಾಲಯಗಳ ಜೀರ್ಣೋದ್ಧಾರಕ್ಕೆ ಎಲ್ಲರೂ ಸಹಕರಿಸಿ

## ಶಿಥಿಲಗೊಂಡಿರುವ ಶ್ರೀ ಕಾಡು ಬಸವೇಶ್ವರ ಹಾಗೂ ಆಂಜನೇಯಸ್ವಾಮಿ ದೇವಾಲಯ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲೂಕು ಕೇಂದ್ರದಲ್ಲಿ ನೊಣವಿನಕೆರೆ ಕಾಡು ಸಿದ್ದೇಶ್ವರ ಮಠದ ಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಮತ್ತು ಸಮಾಜದ ಸಹಕಾರದೊಂದಿಗೆ ಶ್ರೀ ಕಾಡು ಬಸವೇಶ್ವರ ಹಾಗೂ ಆಂಜನೇಯ ಸ್ವಾಮಿ ದೇವಾಲಯ ನಿರ್ಮಾಣಕ್ಕೆ ಎಲ್ಲರೂ ಸಹಕಾರ ನೀಡುವಂತೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾ ಸಭಾ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್ ಅವರು ಮನವಿ ಮಾಡಿದರು.



ತಾಲ್ಲೂಕು ಕೇಂದ್ರದಲ್ಲಿ ಹಿತೈಷಿಗಳು ಸ್ನೇಹಿತರು ಸಮಾಜದ ಪ್ರಮುಖರು ಆಯೋಜಿಸಿದ್ದ ತಮ್ಮ 55ನೇ ವರ್ಷದ ಹುಟ್ಟುಹಬ್ಬ ಕಾರ್ಯಕ್ರಮದಲ್ಲಿ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, ತಾಲ್ಲೂಕು ಕೇಂದ್ರದಲ್ಲಿ ವೀರಶೈವ ಸಮಾಜಕ್ಕೆ ಸೇರಿದ ಜಾಗವು ಹಲವು ವರ್ಷಗಳಿಂದ ಖಾಲಿ ಇರುವುದರ ಜೊತೆಗೆ ಕಾಡು ಬಸವೇಶ್ವರ ಹಾಗೂ ಆಂಜನೇಯ ಸ್ವಾಮಿ ದೇವಾಲಯಗಳು ಹೆಚ್ಚು ಶಿಥಿಲಗೊಂಡಿರುವ ಕಾರಣ ಪುನರ್ ದೇವಾಲಯ ಜೀರ್ಣೋದ್ಧಾರಕ್ಕೆ ಎಲ್ಲರೂ ಹೆಚ್ಚಿನ ಸಹಕಾರ ನೀಡಿದರೆ ನೊಣವಿನಕೆರೆ ಮಠದ ಪೂಜಾ ಸ್ವಾಮೀಜಿಯವರು ಕೂಡ ಸಹಕಾರ ನೀಡಲಿದ್ದಾರೆ. ಸದ್ಯದಲ್ಲೇ ಈ ಬಗ್ಗೆ ಇದೇ ತಿಂಗಳು ಎಲ್ಲರೂ ಒಗ್ಗೂಡಿ ಚರ್ಚೆ ನಡೆಸುವ ಮೂಲಕ ಒಮ್ಮತದ ತೀರ್ಮಾನಕ್ಕೆ ಬರಬೇಕಾಗಿದೆ ಎಂದು ಅವರು ಕಿವಿಮಾತು ಹೇಳಿದರು.

ಹಿತೈಷಿಗಳು ಸ್ನೇಹಿತರು ಹಾಗೂ ವೀರಶೈವ ಸಮಾಜದ ಪ್ರಮುಖರು ಆಯೋಜಿಸಿದ ಹುಟ್ಟುಹಬ್ಬ ಕಾರ್ಯಕ್ರಮದಲ್ಲಿ ಕೇಕ್ ಕತ್ತರಿಸಿ ಸನ್ಮಾನಿಸುವ ಮೂಲಕ ಅಭಿನಂದನೆ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಸಮಾಜದ ಪ್ರಮುಖರಾದ ಪ್ರಭಣ್ಣ, ಎಂ.ಎಸ್. ಸುರೇಶ್, ಪೋಲಿಸ್ ಕುಮಾರ್, ನಿವೃತ್ತ ಶಿಕ್ಷಕ ಮುಳಕೆರೆ ಬಸವರಾಜು, ಎ.ಜಿ.ದರ್ಶನ್ ಪಟೇಲ್, ಎಸ್. ಚಿರಂಜೀವಿ, ಗಿರೀಶ್, ತಾವರೆಕೆರೆ ಮಂಜು, ಮರೀಶೆಟ್ಟಿಹಳ್ಳಿ ಸತೀಶ್, ದಯಾನಂದ, ಸಮಾಜ ಸೇವಕ ಮನೋಹರ್, ಬ್ಯಾಂಕ್ ಮ್ಯಾನೇಜರ್ ಕಿರಣ್, ವಕೀಲ ಕುಂಭೇನಹಳ್ಳಿ ಗಿರೀಶ್, ಮಧುಸೂದನ್, ಅರ್ಚಕ ಶಿವಾನಂದ್, ಸೂರಿ, ಕಾಂತರಾಜ್, ಧನಂಜಯ್ ಸೇರಿದಂತೆ ಇನ್ನಿತರರು ಹಾಜರಿದ್ದರು.



**ಆಲೂರು: ಮಲ್ಲಾಪುರ ಗ್ರಾಮ ಪಂಚಾಯಿತಿ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಸಭಾಂಗಣವನ್ನು ಶಾಸಕ ಸಿಮೆಂಟ್ ಮಂಜು ಉದ್ಘಾಟಿಸಿದರು. ಅಧ್ಯಕ್ಷೆ ಹೇಮಾಲೋಕೇಶ್, ಉಪಾಧ್ಯಕ್ಷ ಕೃಷ್ಣಪ್ಪ, ಪಿಡಿಒ ವೀರಭದ್ರಯ್ಯ, ಸದಸ್ಯರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.**

# ಫೆ.9 ರಂದು ಸಮಾಲೋಚನಾ ಸಭೆ

• ಪ್ರಜೋದಯ ವರದಿ

**ಹಾಸನ:** ಮಹಾನಗರ ಪಾಲಿಕೆಯ 2026-27ನೇ ಸಾಲಿನ ಆಯವ್ಯಯ ಅಂದಾಜು ಪಟ್ಟಿ ತಯಾರಿಸುವ ಸಂಬಂಧ ನೊಂದಾಯಿತ ವಸತಿ ಕ್ಷೇಮಾಭಿವದ್ಧಿ ಸಂಘಗಳು, ನೊಂದಾಯಿತ ಸರ್ಕಾರೇತರ ಸಂಘ ಸಂಸ್ಥೆಗಳು, ವಾಣಿಜ್ಯ ಮತ್ತು ಕೈಗಾರಿಕಾ ಸಂಘಗಳು, ಇತರೆ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ರಾಜಕೀಯ ಮುಖಂಡರುಗಳು, ಹಿರಿಯ ನಾಗರೀಕರು, ಮಾಧ್ಯಮದವರು ಮತ್ತು ಸಾರ್ವಜನಿಕ ಅಭಿಪ್ರಾಯಗಳನ್ನು ಸಂಗ್ರಹಿಸಲು ಎರಡನೇ ಸುತ್ತಿನ ಸಾರ್ವಜನಿಕ ಸಮಾಲೋಚನೆ ಸಭೆಯನ್ನು ಫೆ.9 ರಂದು ಮ.12.30 ಗಂಟೆಗೆ ಮಹಾನಗರ ಪಾಲಿಕೆಯ ಕುವೆಂಪು ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಸಭೆಗೆ ಸಾರ್ವಜನಿಕರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಮಾಜ ಸೇವಕರು ಹಾಗೂ ರಾಜಕೀಯ ಮುಖಂಡರುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಅಮೂಲ್ಯ ಸಲಹೆಗಳನ್ನು ನೀಡಿ ಹಾಸನ ಮಹಾನಗರ ಪಾಲಿಕೆಯ 2026-27ನೇ ಸಾಲಿನ ನಗರ ಅಭಿವೃದ್ಧಿಗೆ ಸಂಬಂಧಿಸಿದಂತೆ ಚರ್ಚಿಸಿ ಸಭೆಯನ್ನು ಯಶಸ್ವಿಗೊಳಿಸುವಂತೆ ಆಯುಕ್ತರು ತಿಳಿಸಿದ್ದಾರೆ.

## ಐದು ಗ್ಯಾರಂಟಿ ಯೋಜನೆಗಳಿಂದ ಬಡವರಿಗೆ ಮಹತ್ವದ ನೆರವು: ರಾಜ್ಯ ಉಪಾಧ್ಯಕ್ಷ ಸಂಪಂಗಿ

# ಹಾಸನ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷ ಸುಭದ್ರ

• ಪ್ರಜೋದಯ ವರದಿ

**ಸಕಲೇಶಪುರ:** ವಿಧಾನಸಭಾ ಚುನಾವಣೆಯಲ್ಲಿ ಅಭ್ಯರ್ಥಿಗಳ ಸೋಲು ಸಂಭವಿಸಿದ್ದರೂ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವು ಸಾಧಿಸಿರುವುದು ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷ ಗಟ್ಟಿಯಾಗಿದೆ ಎಂಬುದಕ್ಕೆ ಸಾಕ್ಷಿಯಾಗಿದೆ ಎಂದು ಮಾಜಿ ಶಾಸಕ ಪ್ರದೇಶ ಕಾಂಗ್ರೆಸ್ ಪ2ಕ್ಷದ ರಾಜ್ಯ ಉಪಾಧ್ಯಕ್ಷ ಎನ್.ಸಂಪಂಗಿ ಹೇಳಿದರು.



ತಾಲ್ಲೂಕಿನ ಬಾಳುಪೇಟೆಯಲ್ಲಿ ನಡೆದ ಬೆಳಗೋಡು ಹೋಬಳಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಹಾಸನ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಕಟ್ಟಿದ ಅನೇಕ ಹಿರಿಯ ನಾಯಕರು ಹಾಗೂ ವಿದ್ಯಾರ್ಥಿ ರಾಜಕೀಯದಿಂದ ಬಂದ ಕಾರ್ಯಕರ್ತರ ಶ್ರಮವೇ ಇಂದಿನ ಬಲವಾಗಿದೆ ಎಂದು ಹೇಳಿದರು.

ಪಕ್ಷದ ಒಳಜಗಳಗಳಿಂದ ಮೂರನೇ ವ್ಯಕ್ತಿಗಳಿಗೆ ಲಾಭವಾಗುತ್ತದೆ. ಆದ್ದರಿಂದ ಕಾಂಗ್ರೆಸ್ ಪಕ್ಷವನ್ನು ಉಳಿಸಿ ಬಲಪಡಿಸುವ ಜವಾಬ್ದಾರಿ ಪ್ರತಿಯೊಬ್ಬ ಕಾರ್ಯಕರ್ತರ ಮೇಲಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರು ಹಾಗೂ ಎಲ್ಲಾ ವರ್ಗದ ಬಡವರ ನಂಬಿಕೆಯ ಪಕ್ಷವೇ ಕಾಂಗ್ರೆಸ್. ಕಾಂಗ್ರೆಸ್ ಇಲ್ಲದಿದ್ದರೆ ನಾವು ಯಾರೂ ಇಲ್ಲ ಎಂಬುದನ್ನು ಮನಗಾಣಬೇಕು ಎಂದು ಹೇಳಿದರು.

ಡಿಸಿಎಂ ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ರಾಜ್ಯ ಕಾಂಗ್ರೆಸ್ ಪಕ್ಷ ಬಲಗೊಂಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಜನಪರವಾಗಿ ಕೆಲಸ ಮಾಡುತ್ತಿದೆ. ಐದು ಗ್ಯಾರಂಟಿ ಯೋಜನೆಗಳಿಂದ ಬಡವರಿಗೆ ಮಹತ್ವದ ನೆರವು ದೊರಕುತ್ತಿದೆ. ಹಿಂದೆ ಈ ಯೋಜನೆಗಳನ್ನು ವಿರೋಧಿಸಿದ್ದ ಬಿಜೆಪಿಯೇ ಈಗ ಬೇರೆ ರಾಜ್ಯಗಳಲ್ಲಿ ಅದೇ ಮಾದರಿಯನ್ನು ಅನುಸರಿಸುತ್ತಿರುವುದು ಕಾಂಗ್ರೆಸ್ ಸರ್ಕಾರದ ಸಾಧನೆಗೆ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ಮುಂಬರುವ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಚುನಾವಣೆಗಳಲ್ಲಿ ಪಕ್ಷ ಒಗ್ಗಟ್ಟಾಗಿ ಕಾರ್ಯ ನಿರ್ವಹಿಸಬೇಕು. ಪಕ್ಷಕ್ಕೆ ಹಾನಿ ಉಂಟಾಗುವ ಯಾವುದೇ ವ್ಯಕ್ತಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಹಿಂಜರಿಯುವುದಿಲ್ಲ. ಕಾಂಗ್ರೆಸ್ ಪಕ್ಷಕ್ಕಿಂತ ದೊಡ್ಡವರು ಯಾರೂ ಇಲ್ಲ. ಪಕ್ಷ ಇದ್ದರೆ ಮಾತ್ರ ಕಾರ್ಯಕರ್ತರಿಗೆ ಸ್ಥಾನಮಾನ ಹಾಗೂ ಅವಕಾಶಗಳು ದೊರೆಯುತ್ತವೆ ಎಂದರು.


ಹಾಸನ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣ್ ಮಾತನಾಡಿ, ಪಕ್ಷ ಸಂಘಟನೆಗೆ ಶಿಸ್ತು, ಏಕತೆ ಹಾಗೂ ಸಮನ್ವಯ ಅತ್ಯಂತ ಅವಶ್ಯಕವಾಗಿದೆ. ಪ್ರತಿಯೊಂದು ಹಂತದಲ್ಲಿಯೂ ಪಕ್ಷದ ಕಾರ್ಯಕರ್ತರು ಒಗ್ಗಟ್ಟಾಗಿ ಕೆಲಸ ಮಾಡಿದರೆ ಮಾತ್ರ ಸಂಘಟನೆ ಬಲವಾಗುತ್ತದೆ. ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಸಂಘಟನೆಯನ್ನು ಮತ್ತಷ್ಟು ಗಟ್ಟಿಗೊಳಿಸುವ ಕೆಲಸ ನಡೆಯಬೇಕು ಎಂದು ಹೇಳಿದರು.

ಪಕ್ಷದೊಳಗೆ ಭಿನ್ನಾಭಿಪ್ರಾಯಗಳು ಇದ್ದರೆ ಅವುಗಳನ್ನು ಸಭೆಗಳಲ್ಲಿ ಅಥವಾ ಸಾರ್ವಜನಿಕವಾಗಿ ಚರ್ಚಿಸುವ ಬದಲು, ಸಂಬಂಧಪಟ್ಟ ನಾಯಕತ್ವದ ಮೂಲಕ ಒಳಾಂಗಣವಾಗಿ ಪರಿಹರಿಸಿಕೊಳ್ಳಬೇಕು. ಪದೇಪದೇ ವ್ಯಕ್ತಿಗಳ ಹೆಸರನ್ನು ತೆಗೆದುಕೊಂಡು ಟೀಕೆ ಮಾಡುವುದರಿಂದ ಅವರಿಗೆ ಅನಾವಶ್ಯಕ ಪ್ರಚಾರ ಸಿಗುತ್ತದೆ. ಕಾಂಗ್ರೆಸ್ ಪಕ್ಷ ಒಂದು ದೊಡ್ಡ ಕುಟುಂಬವಾಗಿದ್ದು, ಕುಟುಂಬದೊಳಗಿನ ಸಮಸ್ಯೆಗಳನ್ನು ಕುಟುಂಬದೊಳಗೇ ಬಗೆಹರಿಸಿಕೊಳ್ಳಬೇಕು ಎಂದರು.

ಪ್ರದೇಶ ಕಾಂಗ್ರೆಸ್ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಟಿ.ಬಿ. ಶ್ರೀನಿವಾಸ್, ತಾಲೂಕು ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಮುರಳಿ ಮೋಹನ್ ಇನ್ನಿತರರಿದ್ದು.

# ಕಾಣೆಯಾದವರ ಪತ್ತೆಗೆ ಮನವಿ

• ಪ್ರಜೋದಯ ವರದಿ



**ಹಾಸನ:** ಮನೆಯಿಂದ ಹೊರಗೆ ಹೋಗಿದ್ದ ವ್ಯಕ್ತಿ ತಿಂಗಳಾದರೂ ವಾಪಾಸ್ ಬಾರದೆ ಇದ್ದು ಸುಳಿವು ಸಿಕ್ಕರೆ ಮಾಹಿತಿ ನೀಡುವಂತೆ ಕೋರಿದೆ.

ದುದ್ದ ಹೋಬಳಿ ಸೋಮನಹಳ್ಳಿ ಗ್ರಾಮದ ಬೋರಶೆಟ್ಟಿ (85) ಕಾಣೆಯಾದವರು. 2025ರ ಡಿ. 30ರಂದು ಹಾಸನಕ್ಕೆ ಹೋಗಿ ಬರುತ್ತೇನೆಂದು ಹೇಳಿ ಹೋದವರು ಸಂಜೆಯಾದರೂ ಬಂದಿಲ್ಲ. ಸಂಬಂಧಿಕರ ಊರು, ಮತ್ತಿತರ ಕಡೆ ಹುಡುಕಿದರೂ ಸುಳಿವು ಪತ್ತೆಯಾಗಿಲ್ಲ. ಕಾಣೆಯಾದವರ ಮುಖ ಚಹರೆ: 5.5 ಅಡಿ ಎತ್ತರ, ಕಪ್ಪು ಮೈಬಣ್ಣ, ಮನೆಯಿಂದ ಹೋಗುವಾಗ ಬಿಳಿ ಪಂಚೆ, ಶರ್ಟ್, ಹೆಗಲ ಮೇಲೆ ಟವೆಲ್ ಧರಿಸಿದ್ದರು. ಸುಳಿವು ಸಿಕ್ಕರೆ ದುದ್ದ ಪೊಲೀಸ್ ಠಾಣೆ ಅಥವಾ ದೂರವಾಣಿ ಸಂ: 08172-223935 ಇಲ್ಲಿಗೆ ಸಂಪರ್ಕಿಸಲು ಕೋರಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

# ಕರುನಾಡಿನಲ್ಲಿ ನೆಮ್ಮದಿಯ ಗ್ಯಾರಂಟಿ

## ನಿಮ್ಮ ಆರೋಗ್ಯ ನಮ್ಮ ಆದ್ಯತೆ







- ಹೃದಯಾಘಾತ ತಡೆಗೆ **ಡಾ. ಪುನೀತ್ ರಾಜ್‌ಕುಮಾರ್ ಹೃದಯಜ್ಯೋತಿ** ಯೋಜನೆ ಜಾರಿ
- ಅಂಧತ್ವ ಮುಕ್ತ ಕರ್ನಾಟಕ ನಿರ್ಮಾಣಕ್ಕಾಗಿ **ಆಶಾಕಿರಣ** ಯೋಜನೆ
- ಬೆಂಗಳೂರು ನಗರದ ಸರ್ಕಾರಿ ಆಸ್ಪತ್ರೆಗಳಿಗೆ **ಪೌಷ್ಟಿಕ ಆಹಾರ ಪೂರೈಕೆ**
- ತಾಯಿ ಮತ್ತು ಶಿಶು ಮರಣ ಇಳಿಕೆಗೆ ತಾಲ್ಲೂಕು ಆಸ್ಪತ್ರೆಗಳಲ್ಲಿ ತ್ರಿವಳಿ ತಜ್ಞರ ನಿಯೋಜನೆ
- ಮೂತ್ರಪಿಂಡ, ಹೃದಯ, ಯಕೃತ್ ಮತ್ತು ಬಹು ಅಂಗಾಂಗ ವೈಫಲ್ಯಕ್ಕೆ **ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ಉಚಿತ** ಕಸಿ ಚಿಕಿತ್ಸೆ
- ದೇಶದಲ್ಲೇ ಮೊದಲ ಬಾರಿಗೆ ರಾಜ್ಯದ ಎಲ್ಲಾ ಸರ್ಕಾರಿ ಇಲಾಖೆಗಳ ನೌಕರರು, ಗುತ್ತಿಗೆ, ಹೊರಗುತ್ತಿಗೆ ನೌಕರರಿಗೆ **₹. 5 ಲಕ್ಷದ ವರೆಗೆ ನಗದು ರಹಿತ ಚಿಕಿತ್ಸೆಯ** ಸೌಲಭ್ಯ
- ಎಲ್ಲ ತಾಲ್ಲೂಕು ಆಸ್ಪತ್ರೆಗಳಲ್ಲಿ 24x7 ಆರೋಗ್ಯ ಸೇವೆ
- ರಾಜ್ಯದ ಎಲ್ಲ ಜಿಲ್ಲಾಸ್ಪತ್ರೆಗಳು, ತಾಲ್ಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ದೃಷ್ಟಿಕೇಂದ್ರಗಳ ಸ್ಥಾಪನೆ
- **ಗೃಹ ಆರೋಗ್ಯ :** ಆರೋಗ್ಯ ಸೇವೆ ಮನೆ ಬಾಗಿಲಿಗೆ ಯೋಜನೆ ಜಾರಿ
- ಮಹಿಳೆಯರಲ್ಲಿ ಗರ್ಭಕಂಠದ ಕ್ಯಾನ್ಸರ್ ಅನ್ನು ತಡೆಗಟ್ಟಲು 14 ವರ್ಷದ ಹೆಣ್ಣು ಮಕ್ಕಳಿಗೆ **HPV ಲಸಿಕೆ**

## ಕರ್ನಾಟಕ ನವ ನಿರ್ಮಾಣಕ್ಕೆ ಗ್ಯಾರಂಟಿ ಸರ್ಕಾರ...

ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿ ಮಾಡುತ್ತಾ ನುಡಿದಂತೆ ನಡೆದು ಜನರ ವಿಶ್ವಾಸ ಗಳಿಸಿದ್ದೇವೆ.

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

## ಪ್ರತಿಪಕ್ಷಗಳ ಪ್ರತಿಭಟನೆ ಹಿನ್ನಲೆ ಮೋದಿ ಗೈರು | ಸ್ಪೀಕರ್ ಓಂ ಬಿರ್ಲಾ ಸಮರ್ಥನೆ

# ಪ್ರಧಾನಿ ಅನುಪಸ್ಥಿತಿಯಲ್ಲಿ ರಾಷ್ಟ್ರಪತಿ ವಂದನಾ ನಿರ್ಣಯ ಅಂಗೀಕಾರ

• ಪ್ರಜೋದಯ ವರದಿ

**ನವದೆಹಲಿ:** ಸಂಸತ್ತಿನ ಜಂಟಿ ಅಧಿವೇಶನವನ್ನು ಉದ್ದೇಶಿಸಿ ರಾಷ್ಟ್ರಪತಿಯವರು ಮಾಡಿದ ಭಾಷಣದ ಮೇಲಿನ ವಂದನಾ ನಿರ್ಣಯವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಚರ್ಚೆಗೆ ಉತ್ತರ ನೀಡದೆಯೇ ಗುರುವಾರ ಲೋಕ ಸಭೆಯಲ್ಲಿ ಅಂಗೀಕರಿಸಲಾಯಿತು.



ಕಾಂಗ್ರೆಸ್ ಸದಸ್ಯರು ದುರದೃಷ್ಟಕರ ಘಟನೆ ಗಳಿಗೆ ಕಾರಣವಾಗುವ ಅನಿರೀಕ್ಷಿತ ಪ್ರತಿ ಭಟನೆ ಯಲ್ಲಿ ಪಾಲ್ಗೊಳ್ಳುತ್ತಾರೆಂಬ ಬಗ್ಗೆ ಸ್ಪಷ್ಟ ಮಾಹಿತಿ ಇದ್ದ ಕಾರಣ ಸದನಕ್ಕೆ ಬಾರದಂತೆ ಪ್ರಧಾನಿ ಅವರಿಗೆ ನಾನೇ ಮನವಿ ಮಾಡಿದ್ದೆ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ಸದನಕ್ಕೆ ತಿಳಿಸಿದರು.

ಸಭಾಧ್ಯಕ್ಷರ ಹೇಳಿಕೆಗೆ ಕಾಂಗ್ರೆಸ್ ತಿರು ಗೇಟು ನೀಡಿದೆ. ವಿರೋಧ ಪಕ್ಷ ಪ್ರತಿಭಟನೆ ನಡೆಸಿದ್ದರಿಂದ ವಂದನಾ ನಿರ್ಣಯದ ಚರ್ಚೆಗೆ 2004ರ ಜೂನ್‌ನಲ್ಲಿ ಆಗಿನ ಪ್ರಧಾನಿ ಮನ ಮೋಹನ್ ಸಿಂಗ್ ಲೋಕಸಭೆ ಮತ್ತು ರಾಜ್ಯ ಸಭೆಯಲ್ಲಿ ಉತ್ತರ ನೀಡಿರಲಿಲ್ಲ. ಸಿಂಗ್ ಅವರು ಸದನದಲ್ಲಿ ಹಾಜರಿದ್ದರು ಮತ್ತು ತಮ್ಮ ಭಾಷ ಣವಿಲ್ಲದೆಯೇ ನಿರ್ಣಯದ ಮೇಲೆ ಮತ ಚಲಾಯಿಸುವಂತೆ ಮನವಿ ಮಾಡಿದ್ದರು. ಭಾರತದ ಸೇನೆಯ ಮಾಜಿ ಮುಖ್ಯಸ್ಥ ಎಂ.ಎಂ. ನರವಣೆ ಅವರ ಅಪ್ರಕಟಿತ ಆತ್ಮಚರಿತ್ರೆ ಪುಸ್ತಕದ ಲ್ಲಿನ ವಿಚಾರವನ್ನು ಉಲ್ಲೇಖಿಸಲು ಲೋಕ ಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಅವಕಾಶ ನಿರಾಕರಿಸಿದ ಬಳಿಕ ಲೋಕಸಭೆಯಲ್ಲಿ ಬಿಕ್ಕಟ್ಟು ಸೃಷ್ಟಿಯಾಗಿದೆ. ಗುರುವಾರ ಬೆಳಿಗ್ಗೆ ಕಲಾಪ ಆರಂಭ ವಾಗುತ್ತಿದ್ದಂತೆಯೇ ವಿಪಕ್ಷಗಳ ಸದಸ್ಯರು ಗದ್ದಲ ಎಬ್ಬಿಸಿದರು. ಕಲಾಪವನ್ನು ಮಧ್ಯಾಹ್ನ 12ಕ್ಕೆ ಮುಂದೂಡಲಾಯಿತು. ಬಳಿಕ ಸದನ ಸೇರಿದಾಗ ಓಂ ಬಿರ್ಲಾ ಅವರು ಧನ್ಯವಾದ ನಿರ್ಣಯ ಮಂಡಿಸಿದರು. ಆಗ ಸದನದಲ್ಲಿ ಮೋದಿ, ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇರಲಿಲ್ಲ.

ಈ ವೇಳೆ, ವಿಪಕ್ಷಗಳ ಹಲವು ಸದಸ್ಯರು ಸಭಾಧ್ಯಕ್ಷರ ಪೀಠದ ಎದುರು ಪ್ರತಿಭಟನೆ ನಡೆಸಿ ಘೋಷಣೆಗಳನ್ನು ಕೂಗಿದರು. ಮೊದಲು ವಿರೋಧ ಪಕ್ಷಗಳು ಸಲ್ಲಿಸಿದ ತಿದ್ದು ಪಡಿಗಳನ್ನು ಓಂಬಿರ್ಲಾ ಮತಕ್ಕೆ ಹಾಕಿದರು. ಧ್ವನಿ ಮತದ ಮೂಲಕ ಈ ತಿದ್ದುಪಡಿಗಳನ್ನು ತಿರಸ್ಕರಿಸ ಲಾಯಿತು. ನಂತರ, ರಾಷ್ಟ್ರಪತಿ ಯವರ ಭಾಷ ಣಕ್ಕೆ ಧನ್ಯವಾದ ಸಲ್ಲಿಸುವ ನಿರ್ಣಯವನ್ನು ಸಭಾಧ್ಯಕ್ಷರು ಓದಿದರು. ವಿರೋಧ ಪಕ್ಷದ ಸದಸ್ಯರ ಘೋಷಣೆಗಳ ನಡುವೆಯೇ ಇದನ್ನು ಧ್ವನಿ ಮತದಿಂದ ಅಂಗೀಕರಿಸಲಾಯಿತು. ಸದನ ವನ್ನು ಮಧ್ಯಾಹ್ನ 2 ಗಂಟೆಗೆ ಓಂಬಿರ್ಲಾ ಮುಂದೂಡಿದರು. ಕಲಾಪ ಪುನರಾರಂಭ ಗೊಂಡಾಗ ವಿಪಕ್ಷ ಸದಸ್ಯರು ಮತ್ತೆ ಗದ್ದಲ ಎಬ್ಬಿಸಿದರು. ಕಲಾಪ 3 ಗಂಟೆಗೆ ಮುಂದೂಡಿಕೆ ಯಾಯಿತು. ಮಧ್ಯಾಹ್ನ 3 ಗಂಟೆಗೆ ಸದನಕ್ಕೆ ಮರಳಿದ ಬಿರ್ಲಾ, ಮೋದಿ ಅನುಪಸ್ಥಿತಿ ಮತ್ತು ಚರ್ಚೆಗೆ ಅವರು ಏಕೆ ಉತ್ತರಿಸಲಿಲ್ಲವೆಂಬ ಬಗ್ಗೆ ವಿವರಣೆ ನೀಡಿದರು.

### ಪ್ರತಿಪಕ್ಷಗಳಿಂದ ಸಭಾತ್ಯಾಗ

ಪ್ರಧಾನಿ ಮೋದಿ ಭಾಷಣ ಆರಂಭವಾಗುತ್ತಿದ್ದಂತೆ ಪ್ರತಿಪಕ್ಷಗಳ ಗದ್ದಲ ಆರಂಭಗೊಂಡಿತು. ಪ್ರಧಾನಿ ಮೋದಿ ವಿರುದ್ಧ ವಿಪಕ್ಷ ನಾಯಕರು ಘೋಷಣೆ ಕೂಗಿದರು. ಸರ್ವಾಧಿಕಾರಿ ಧೋರಣೆ ನಡೆಯುವುದಿಲ್ಲ ಎಂದು ಸದಸ್ಯರು ಘೋಷಣೆ ಕೂಗಿ, ಸಭಾತ್ಯಾಗ ಮಾಡಿದರು.

**ಭಾರತದ ಚಿತ್ರಣ ಬದಲಿಸಲು ಸಮಯ ಬೇಕು:** ನಮ್ಮ ಶಕ್ತಿಯ ಮಹತ್ವದ ಭಾಗವನ್ನು ಹಿಂದಿನ ತಪ್ಪುಗಳನ್ನು ಸರಿಪಡಿಸಲು ವ್ಯಯ ವಾಗುತ್ತಿದೆ. ಆ ಅವಧಿಯಲ್ಲಿ ಭಾರತದ ಬಗ್ಗೆ ಸೃಷ್ಟಿಯಾದ ಚಿತ್ರಣವನ್ನು ಅಳಿಸಲು ಹೆಚ್ಚಿನ ಪ್ರಯತ್ನ ಬೇಕಾಗುತ್ತದೆಂದು ಪ್ರಧಾನಿ ನರೇಂದ್ರ ಮೋದಿ ಅವರು ಗುರುವಾರ ಹೇಳಿದ್ದಾರೆ.

ರಾಜ್ಯಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಗೆ ಉತ್ತ ರಿಸಿದ ಪ್ರಧಾನಿ ನರೇಂದ್ರ ಮೋದಿ ಅವರು, ನಾವು ಭವಿಷ್ಯಕ್ಕೆ ಸಿದ್ಧವಾಗಿರುವ ನೀತಿಗಳ ಮೇಲೆ ಬಲವಾದ ಒತ್ತು ನೀಡಿದ್ದೇವೆ. ಇಂದು, ದೇಶವನ್ನು ನೀತಿ ಮತ್ತು ಕಾರ್ಯ ತಂತ್ರದ ಆಧಾರದ ಮೇಲೆ ಆಳಲಾಗುತ್ತಿದೆ. ಭಾರತದ ಮೇಲಿನ ಜಾಗತಿಕ ನಂಬಿಕೆ ಹೆಚ್ಚುತ್ತಿದೆ ಎಂದರು.

ಪ್ರತಿಪಕ್ಷಗಳ ತೀವ್ರ ಗದ್ದಲ ಹಾಗು ಕೋಲಾ ಹದ ನಡುವೆ ದೇಶದ ಪ್ರಗತಿಯ ಕುರಿತು ವಿವರಣೆ ನೀಡಿದ ಪ್ರಧಾನಿ ಮೋದಿ, ಭಾರತ ಈಗ ಎಲ್ಲಾ ಕ್ಷೇತ್ರಗಳಲ್ಲೂ ಮುನ್ನು ಗ್ಗುತ್ತಿದೆ. 21ನೇ ಶತಮಾನದ ಮೊದಲ ಕಾಲು ಭಾಗ ಮುಗಿದು ಹೋಗಿದೆ. ಸ್ವಾತಂತ್ರ್ಯದ ಶತಮಾ ನೋತ್ಸವದಲ್ಲಿ ಮತ್ತೊಂದು ಕಾಲುಭಾಗ ಬರಲಿದೆ. 21ನೇ ಶತಮಾನದ ಮತ್ತೊಂದು ಕಾಲು ಭಾಗ ಭಾರತದ ಅಭಿ ವೃದ್ಧಿಗೆ ಮೀಸಲು ಎಂದು ಹೇಳಿದರು.

ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದಾಗ ಆರ್ಥಿಕತೆಯಲ್ಲಿ 6ನೇ ಸ್ಥಾನದಲ್ಲಿ ಭಾರತ ಇತ್ತು. ಇವರೆಲ್ಲಾ ಸೇರಿ 12ನೇ ಸ್ಥಾನಕ್ಕೆ ಇಳಿಸಿ ಬಿಟ್ಟರು. ನಾವು ಅಧಿಕಾರಕ್ಕೆ ಬಂದ ಬಳಿಕ 3ನೇ ಸ್ಥಾನಕ್ಕೆ ಬಂದಿ ದ್ದೇವೆ. ಭಾರತ ಎಲ್ಲಾ ಕ್ಷೇತ್ರಗಳಲ್ಲಿ ಮುನ್ನು ಗ್ಗುತ್ತಿದೆ. ದೊಡ್ಡ ದೊಡ್ಡ ಆರ್ಥಿಕತೆಯಲ್ಲಿ ಭಾರತದ ಬೆಳವ ಣಿಗೆಯೂ ಹೆಚ್ಚಿದೆ. ಹೆಚ್ಚಿನ ಬೆಳವಣಿಗೆ, ಕಡಿಮೆ ಹಣದುಬ್ಬರ ಇದರ ಲಕ್ಷಣವಾಗಿದೆ ಎಂದರು.

ಭಾರತವು ಹಲವಾರು ದೇಶಗಳೊಂದಿಗೆ ಭವಿಷ್ಯಕ್ಕೆ ಸಿದ್ಧವಾದ ವ್ಯಾಪಾರ ಒಪ್ಪಂದಗಳಿಗೆ ಸಹಿ ಹಾಕುತ್ತಿದೆ. ಕಳೆದ ಕೆಲವು ದಿನಗಳಲ್ಲಿ, ನಾವು ವಿಶ್ವದ 9 ದೊಡ್ಡ ಮತ್ತು ಪ್ರಮುಖ ದೇಶಗಳೊಂದಿಗೆ ವ್ಯಾಪಾರ ಒಪ್ಪಂದಗಳಿಗೆ ಸಹಿ ಹಾಕಿದ್ದೇವೆ. 27 ದೇಶಗಳೊಂದಿಗೆ, ಯುರೋಪಿಯನ್ ಒಕ್ಕೂಟದೊಂದಿಗೆ ಮಾಡಿಕೊಂಡಿರುವ ಒಪ್ಪಂದವೂ ಒಪ್ಪಂದಗಳ ಮಹಾ ತಾಯಿ ಎಂದು ಬಣ್ಣಿಸಿದರು.

ಕೆಂಪುಕೋಟೆಯಲ್ಲಿ ಕಾಂಗ್ರೆಸ್ ಪ್ರಧಾನಿಗಳ ಭಾಷಣ ಕೇಳಿಸಿಕೊಳ್ಳಿ. ಅವರಭಾಷಣಗಳಲ್ಲಿ ಯಾವುದೇ ಅಭಿವೃದ್ಧಿ ಬಗೆಗಿನ ಮಾತುಗಳು ಇರ ಲಿಲ್ಲ. ನಮ್ಮ ಹೆಚ್ಚಿನ ಶಕ್ತಿ ಅವರ ತಪ್ಪು ಗಳನ್ನು ಸರಿ ಪಡಿಸುವುದರಲ್ಲಿ ಮುಗಿಯುತ್ತಿದೆ. ಇಂದು ದೇಶ ನೀತಿಗಳ ಆಧಾರದಲ್ಲಿ ನಡೆಯುತ್ತಿದೆ ಎಂದರು.

## ದೇವೇಗೌಡರ ನೇತೃತ್ವದಲ್ಲಿ ಕೇಂದ್ರ ಸಚಿವರ ಭೇಟಿ

» ಮೊದಲನೇ ಪುಟದಿಂದ

ಹಾಗು ಕೊಡಗು ಜಿಲ್ಲೆಗಳ ಹಾಲು ಉತ್ಪಾದ ಕರಿಗೆ ಅತಿದೊಡ್ಡ ಆಸರೆ ಯಾಗಿದೆ. 1977ರಲ್ಲಿ ಆರಂಭವಾದ ಈ ಒಕ್ಕೂಟವು ಪ್ರತೀ ದಿನ 14.5ರಿಂದ 15 ಲಕ್ಷ ಲೀಟರ್ ನಷ್ಟು ಹಾಲು ಸಂಗ್ರಹ ಮಾಡುತ್ತದೆ. ಸುಮಾರು ಒಂದು ಲಕ್ಷಕ್ಕೂ ಅಧಿಕ ಹಾಲು ಉತ್ಪಾದಕರಿಗೆ ಜೀವ ನೋಪಾಯ ಒದಗಿಸಿದೆ ಎಂದು ಕುಮಾರ ಸ್ವಾಮಿ ಅವರು ಸಚಿವ ಲಲನ್ ಸಿಂಗ್ ಅವರಿಗೆ ವಿವರಿಸಿದರು.

ನಿತ್ಯವೂ ಸಂಗ್ರಹವಾಗುತ್ತಿರುವ ಹಾಲನ್ನು ಸಂಸ್ಕರಿಸಿ ಪ್ಯಾಕೆಟ್‌ಗಳಲ್ಲಿ ತುಂಬಿ ಮಾರಾಟ ಮಾಡುತ್ತಿದೆ ಹಾಗು ಅನೇಕ ಉಪ ಉತ್ಪನ್ನಗಳ ತಯಾರಿಸಿ ಲಾಭದ ಹಾದಿಯಲ್ಲಿ ಮುಂದೆ ಸಾಗುತ್ತಿದೆ. ಈಗ ಹಾಲು ಸಂಗ್ರಹಣೆಯ ಪ್ರಮಾಣ ಹೆಚ್ಚಾಗುತ್ತದೆ. ಗ್ರಾಮೀಣ ಭಾಗದಲ್ಲಿ ಜೀವನೋಪಾಯ ವೃದ್ಧಿ ಮಾಡ ಬೇಕಿದೆ. ಈ ಹಿನ್ನಲೆ ಹಾಸನ ಮೆಗಾಡೇರಿಯನ್ನು ಮತ್ತಷ್ಟು ವಿಸ್ತರಿಸಿ ಸಶಕ್ತಿಗೊಳಿಸಬೇಕಿದೆ. ಹೀಗಾಗಿ ಕೇಂದ್ರ ಸರಕಾರದ ನೆರವು ಅಗತ್ಯವಾಗಿದೆ ಎಂದು ಮನವಿ ಮಾಡಿದರು.

## ಶಿವಲಿಂಗೇಗೌಡ ವಿರುದ್ಧ ಪ್ರಕರಣ ದಾಖಲಿಸಿ

» ಮೊದಲನೇ ಪುಟದಿಂದ

ದಲ್ಲಿ ತೀರ್ಮಾನ ಮಾಡಿದ್ದರಿಂದ ಶಿವಲಿಂಗೇಗೌಡ ಬಚಾವಾದರು. ಹಿಂದೆ ಜಿಲ್ಲೆಯಲ್ಲಿ ಅಶ್ಲೀಲ ವಿಡಿಯೋ ಗಳನ್ನು ಹಂಚಿಲ್ಲ ಎಂದಿರುವುದು, ಲೋಕಸಭೆ ಚುನಾವಣೆಯಲ್ಲಿ ಹಣ ಹಂಚುವ ಸಂಬಂಧ ಇದೇ ಶಿವಲಿಂಗೇಗೌಡರು ಮಾತನಾಡಿರುವ ಆಡಿಯೋ, ಹುಡಾದಲ್ಲಿ ಲಂಚ ಪಡೆದಿರುವ ದಾಖಲೆ ನನ್ನ ಬಳಿ ಇದ್ದು, ಸೂಕ್ತ ಸಮಯದಲ್ಲಿ ಬಿಡುಗಡೆ ಮಾಡುವೆ ಎಂದು ಎಚ್ಚರಿಕೆ ನೀಡಿದರು.

ಶಾಸಕ ಪತ್ನಿಯ ಬಗ್ಗೆ ಅಧಿವೇಶನದಲ್ಲಿ ಕೇವಲವಾಗಿ ಮಾತನಾಡಿರುವ ಶಿವಲಿಂಗೇಗೌಡ ಅವರನ್ನು ಕೂಡಲೇ ಬಂಧಿಸಬೇಕೆಂದು ಒತ್ತಾಯಿಸಿದ ಅವರು, ಸದನದಲ್ಲಿ ಆಡಳಿತ ಪಕ್ಷದವರು ಯಾವುದಾದರೂ ನಿರ್ಣಯ ಕೈಗೊಂಡಾಗ ಅದನ್ನು ಪ್ರತಿಪಕ್ಷಗಳು ವಿರೋಧಿಸುವುದು ಸಾಮಾನ್ಯ. ಆ ಬಗ್ಗೆ ಸರಿಯಾದ ರೀತಿಯಲ್ಲಿ ಚರ್ಚೆ ಮಾಡಬೇಕು. ಅದನ್ನು ಬಿಟ್ಟು ಬಿಜೆಪಿ, ಆರ್‌ಎಸ್‌ಎಸ್, ಮಹಿಳೆಯ ಬಗ್ಗೆ ಕೇವಲವಾಗಿ ಮಾತನಾಡುವುದು ಸರಿಯಾದ ಕ್ರಮವಲ್ಲ. ಶಾಸಕರಾದವರವಿಗೆ ಸದನದಲ್ಲಿ ಹೇಗೆ ನಡೆದುಕೊಳ್ಳಬೇಕು ಎಂದು ಗೊತ್ತಿಲ್ಲವೇ ಎಂದು ಪ್ರಶ್ನಿಸಿದರು.

## ಹೈಕಮಾಂಡ್ ಹೇಳಿದವರಿಗೆ ಜೈ ಹೇಳುತ್ತೇವೆ: ಸಚಿವ ಸತೀಶ್

• ಪ್ರಜೋದಯ ವರದಿ



**ಬೆಂಗಳೂರು:** ಹೈಕಮಾಂಡ್ ಹೇಳಿದವರು ಮುಖ್ಯಮಂತ್ರಿ ಆಗುತ್ತಾರೆ. ಹೈಕಮಾಂಡ್ ಯಾರನ್ನು ಆಯ್ಕೆ ಮಾಡುತ್ತ ದೆಯೊ ಅವರಿಗೆ ಜೈ ಹೇಳುತ್ತೇವೆಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ಸುದ್ದಿಗಾರರೊಂದಿಗೆ ಗುರುವಾರ ಮಾತನಾಡಿದ ಅವರು, ನಾಯಕತ್ವ ಬದಲಾವಣೆ, ಸಂಪುಟ ಪುನರ್‌ರಚನೆ ಕುರಿತು ಗೊಂದಲವನ್ನು ಹೈಕಮಾಂಡ್ ಆದಷ್ಟು ಬೇಗ ಪರಿಹರಿಸ ಬೇಕೆಂದರು. ಸತೀಶ್ ಜಾರಕಿಹೊಳಿ ಮುಖ್ಯಮಂತ್ರಿ ಆಗಬೇಕೆಂಬ ಬೇಡಿಕೆಯ ಕುರಿತು ಪ್ರತಿಕ್ರಿಯಿಸಿ, ಈ ರೀತಿ ನಾನು ಬೇಡಿಕೆ ಇಟ್ಟಿಲ್ಲ. ಸಚಿವನಾಗಿ ಎರಡು ವರ್ಷ ಕೆಲಸ ಮಾಡುತ್ತೇನೆ. ಮುಂದೆ ನೋಡೋಣ ಎಂದರು.

ಕೆಪಿಸಿಸಿ ಅಧ್ಯಕ್ಷ ಹುದ್ದೆಯ ರೇಸ್‌ನಲ್ಲಿಯೂ ನಾನು ಇಲ್ಲ. ನಾಯಕತ್ವ ಬದಲಾವಣೆ ವಿಚಾರ ದಲ್ಲಿ ಗೊಂದಲ ನಿಜ. ಆದಷ್ಟು ಬೇಗ ಹೈಕಮಾಂಡ್ ಅದಕ್ಕೆ ಇತಿಶ್ರೀ ಹೇಳ ಬೇಕೆಂಬುದು ನಮ್ಮ ಆಶಯ ಎಂದರು.

ಗುತ್ತಿಗೆದಾರರ ಸಂಘದ ಆರೋಪದ ಬಗ್ಗೆ ಕೇಳಿದ ಪ್ರಶ್ನೆಗೆ, ಗುತ್ತಿಗೆದಾರರದ್ದು ಆರೋಪ ಅಲ್ಲ, ಬೇಡಿಕೆ. ಲೋಕೋಪಯೋಗಿ ಇಲಾಖೆಯಿಂದಲೂ ಅವರಿಗೆ ಬಿಲ್ ಕೊಡಬೇಕು. ನಾವು ಆದ್ಯತೆ ಮೇಲೆ ಕೊಡುತ್ತಿದ್ದೇವೆ. ಕಾಮಗಾರಿ ತೆಗೆದು ಕೊಳ್ಳದಿದ್ದರೆ ಅವರಿಗೇ ನಷ್ಟ. ಹೊರ ಗಿನವರು ಟೆಂಡರ್‌ನಲ್ಲಿ ಭಾಗವಹಿಸಿದರೆ ಯಾರಿಗೆ ನಷ್ಟ ಹೇಳಿ ಎಂದರು.

ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಪರಿಶಿಷ್ಟ ಜಾತಿ, ಪಂಗಡದ ಉದ್ಯಮಿಗಳು ನನ್ನನ್ನು ಭೇಟಿ ಮಾಡಿದ್ದರು. ಅವರ ಸಮಸ್ಯೆಗಳ ಬಗ್ಗೆ ಮುಖ್ಯಮಂತ್ರಿ ಜೊತೆ ಮಾತನಾಡುತ್ತೇನೆಂದರು.

## ಸ್ಟಾರ್ಟ್‌ಅಪ್‌ಗಳ ಮೂಲಕ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಿ

» ಮೊದಲನೇ ಪುಟದಿಂದ

ಮಾರ್ಗದರ್ಶನ ನೀಡದಿದ್ದರೆ ಒಕ್ಕಲಿಗರ ಸಂಘ ಸ್ಥಾಪನೆಯಾಗುತ್ತಿರಲಿಲ್ಲವೆಂದು ಸ್ವಾಮೀಜಿ ಹೇಳಿದರು.

ವಿವೇಕಾನಂದರು ಕೊಲಂಬೋ ದಿಂದ ಅಲ್ಮೋರ ದವರೆಗೆ ಪ್ರವಾಸ ಕೈಗೊಂಡಿದ್ದಾಗ ಚೆನ್ನೈನಲ್ಲಿ ವ್ಯಾಸಂಗ ಮಾಡಿಕೊಂಡಿದ್ದ ಕೆ.ಹೆಚ್.ರಾಮಯ್ಯ ಅವರು ಭೇಟಿಯಾಗುತ್ತಾರೆ. ವಿವೇಕಾ ನಂದರ ಆದರ್ಶ ಚಿಂತನೆಗಳಿಂದ ಪ್ರಭಾವಿತರಾಗಿದ್ದ ಅವರು ದೇಶಕ್ಕಾಗಿ ನಾನು ಏನಾದರೂ ಕೊಡುಗೆ ನೀಡ ಬೇಕು. ಅದಕ್ಕಾಗಿ ಏನು ಮಾಡ ಬೇಕೆಂದು ಕೇಳಿದಾಗ ವಿವೇಕಾ ನಂದರು ಉತ್ತರಿಸಿ, ಮೊದಲು ನೀನು ಸ್ವಾವಲಂಬಿಯಾಗು, ಸಮಾಜವನ್ನು ಸದೃಢವಾಗಿಸು, ಒಂಟಿಯಾಗಿ ದೇಶ ಕಟ್ಟಲು ಸಾಧ್ಯವಿಲ್ಲವೆನ್ನುತ್ತಾರೆ. ಆ ಮಾತುಗಳಿಂದ ಪ್ರಭಾವಿತರಾದ ರಾಮಯ್ಯ ಬೆಂಗಳೂರಿಗೆ ವಾಪಾ ಸ್ಸಾಗಿ ಒಕ್ಕಲಿಗರ ಸಂಘವನ್ನು ಸ್ಥಾಪಿಸಿದರು. ಆದಿಚುಂಚ ನಗಿರಿ ಮಠಕ್ಕೂ ಅವರು ಸ್ಪಷ್ಟ ರೂಪ ನೀಡಿದರೆಂದರು.

**ದೇವೇಗೌಡರ ಹೋರಾಟ ಸ್ಮರಣೆ**

93 ವರ್ಷದ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ವಾರಕ್ಕೆ ಮೂರು ಸಲ ಡಯಾಲಿಸಿಸ್ ಮಾಡಿಸಿಕೊಳ್ಳುತ್ತಾರೆ. ಈ ಇಳಿವಯಸ್ಸಿನಲ್ಲೂ ರಾಜ್ಯದ ನೀರಾವರಿಗಾಗಿ ರಾಜ್ಯಸಭೆಯಲ್ಲಿ ಮಾತನಾಡುತ್ತಾರೆ. ರಾಜ್ಯಕ್ಕೆ ನೀರು ಕೊಡಿ ಎಂದು ಅವರು ಹೋರಾಡುತ್ತಿರುವಾಗ ಯುವಕರು ಏನು ಮಾಡುತ್ತಿದ್ದೇವೆಂದು ಪ್ರಶ್ನಿಸಿದರು.

ಹಾಸನ ಕೃಷಿಕ್ ಸರ್ವೋದಯ ಫೌಂಡೇಶನ್ ಅಧ್ಯಕ್ಷ ದೇವರಾಜ್ ಅವರು ಮಾತನಾಡಿ, ಸಮಾಜ ಸೇವೆಯನ್ನು ದಾನದ ರೂಪದಲ್ಲಿ ಪಡೆದು ಮುಂದುವರಿಸಲು ಸಾಧ್ಯವಿಲ್ಲ. ಗ್ರಾಮೀಣ ಪ್ರದೇಶದಿಂದ ಬರುವ ಮಕ್ಕಳಿಗೆ ನೆರವಾಗಬೇಕೆಂಬ ಉದ್ದೇಶದಿಂದ 1992ರಲ್ಲಿ ವೈ.ಕೆ.ಪುಟ್ಟಸ್ವಾಮಿಗೌಡರ ನೇತೃತ್ವದಲ್ಲಿ ಫೌಂಡೇಶನ್ ಆರಂಭವಾಯಿತು. ಇಂದು ಸ್ವಂತ ಕಟ್ಟಡ ಹೊಂದಿದ್ದು, ಹಾಸನ ಮಾತ್ರವಲ್ಲದೆ ಸುತ್ತಲಿನ ಜಿಲ್ಲೆಯ ವಿದ್ಯಾರ್ಥಿಗಳು ಸದುಪಯೋಗ ಪಡೆಯಬೇಕು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಗತ್ಯ ತರಬೇತಿ ನೀಡುತ್ತಿದ್ದು, ಈ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸ ಬೇಕೆಂದರು.

**ಕೃಷಿಕ್‌ನಿಂದ 1.50 ಕೋ. ರೂ. ವಿದ್ಯಾರ್ಥಿ ವೇತನ**

ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ವೈ.ಕೆ.ಪುಟ್ಟಸ್ವಾಮಿ ಗೌಡ ಅವರು ಮಾತನಾಡಿ, ಗ್ರಾಮೀಣ ಪ್ರದೇಶದ ವಿದ್ಯಾವಂತ ಯುವಕ-ಯುವತಿಯರನ್ನು ಸ್ಪರ್ಧಾತ್ಮಕ ಪರೀಕ್ಷೆಗೆ ಅಣಿಗೊಳಿಸಬೇಕೆಂಬ ಉದ್ದೇಶದಿಂದ ಸಮಾಜದ 10 ಜನರು ಸೇರಿ ಕೃಷಿಕ್ ಸರ್ವೋದಯ ಫೌಂಡೇಶನ್ ಸ್ಥಾಪಿಸಿದೆವು. ಉನ್ನತ ವ್ಯಾಸಂಗ ಮಾಡಿದ್ದರೂ ಗ್ರಾಮೀಣ ಮಕ್ಕಳು ಹಿಂಜರಿಕೆಯಿಂದ ದೊಡ್ಡ ಹುದ್ದೆಗಳಿಗೆ ಆಸೆಪಡುವುದಿಲ್ಲ. ಆ ಭಯ ಹೋಗಲಾಡಿಸುವ ದೃಷ್ಟಿಯಿಂದ ಫೌಂಡೇಶನ್ ಪ್ರಾರಂಭಿಸಲಾಯಿತು. ಈ ವರೆಗೆ 1.50 ಕೋ.ರೂ. ವರೆಗೆ ವಿದ್ಯಾರ್ಥಿ ವೇತನ ನೀಡಲಾಗಿದೆ ಎಂದರು.

ಶಾಸಕ ಹೆಚ್.ಪಿ.ಸ್ವರೂಪ್, ಮಾಜಿ ಐಎಎಸ್ ಅಧಿಕಾರಿ ಶಂಕರಲಿಂಗೇಗೌಡ ಮಾತನಾಡಿದರು. ಆದಿ ಚುಂಚನಗಿರಿ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಶ್ರೀ ಶೈಲನಾಥ ಸ್ವಾಮೀಜಿ, ಒಕ್ಕಲಿಗರ ಸಂಘದ ಅಧ್ಯಕ್ಷ ಹಾಗು ಕೃಷಿಕ್ ಸರ್ವೋದಯ ಫೌಂಡೇಶನ್ ನಿರ್ದೇಶಕ ಜಿ.ಎಲ್. ಮುದ್ದೇಗೌಡ, ಟ್ರಸ್ಟಿ ಸಿ.ಕೆ.ಶಿವಣ್ಣ, ಕಾರ್ಯದರ್ಶಿ ಹೆಚ್.ಪಿ. ಮೋಹನ್, ನಿವೇಶನ ದಾನಿ ಮಂಜೇಗೌಡರ ಪುತ್ರಿ ಹೇಮಲತಾ, ಮಲೆನಾಡು ತಾಂತ್ರಿಕ ಶಿಕ್ಷಣ ಸಮಿತಿ ಅಧ್ಯಕ್ಷ ಆರ್.ಟಿ.ದ್ಯಾವೇಗೌಡ, ಶೇಖರ್, ವೆಂಕಟೇಶ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ರಘು ಮತ್ತಿತರರಿದ್ದರು.

## ಫೈನಾನ್ಸ್ ಸಿಬ್ಬಂದಿ ಬೆದರಿಕೆ: ರೈತ ಆತ್ಮಹತ್ಯೆ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಸಾಲ ಮರುಪಾವತಿ ಮಾಡದಿದ್ದರೆ ಮನೆ ಜಪ್ತಿ ಮಾಡುವುದಾಗಿ ಖಾಸಗಿ ಫೈನಾನ್ಸ್ ಸಿಬ್ಬಂದಿ ಬೆದರಿಕೆ ಹಾಕಿ, ಕಿರುಕುಳ ನೀಡಿದ್ದರಿಂದ ಮನನೊಂದು ರೈತನೊಬ್ಬ ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾದ ಘಟನೆ ಶ್ರವಣಬೆಳಗೊಳ ಬಳಿಯ ಕೊತ್ತನಘಟ್ಟ ಗ್ರಾಮದಲ್ಲಿ ನಡೆದಿದೆ. ಯೋಗೇಶ್ (50) ಮೃತರು.

ಚನ್ನರಾಯಪಟ್ಟಣ ಫೈನಾನ್ಸ್ ಒಂದರಲ್ಲಿ 7 ಲಕ್ಷರೂ. ಸಾಲ ಪಡೆದಿದ್ದರು. ಪ್ರತಿ ತಿಂಗಳು ಸರಿಯಾಗಿ ಕಂತು ಕಟ್ಟುತ್ತಿದ್ದ ಅವರು, ವೈಯಕ್ತಿಕ ಸಮಸ್ಯೆಯಿಂದ ಕಳೆದ 2 ತಿಂಗಳ ಕಂತನ್ನು ಬಾಕಿ ಉಳಿಸಿಕೊಂಡಿದ್ದರು. ಬುಧವಾರ ರಾತ್ರಿ ಯೋಗೇಶ್ ಅವರ ಮನೆಗೆ ಬಂದಿದ್ದ ಇಬ್ಬರು ಫೈನಾನ್ಸ್ ಸಿಬ್ಬಂದಿ ಮನೆ ಜಪ್ತಿ ಮಾಡುವುದಾಗಿ ಬೆದರಿಕೆ ಹಾಕಿದ್ದರು. ಇದರಿಂದ ಮಾನಕ್ಕೆ ಅಂಜಿ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಫೈನಾನ್ಸ್ ವಿರುದ್ಧ ಕುಟುಂಬಸ್ಥರು ಹಾಗು ಗ್ರಾಮಸ್ಥರು ಆಕ್ರೋಶ ಹೊರಹಾಕಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ವಿಮಾನ ನಿಲ್ದಾಣ ಭೂ ಪರಿಹಾರಕ್ಕೆ ಆಗ್ರಹ

» ಮೊದಲನೇ ಪುಟದಿಂದ

ಪರಿಹಾರ ಪಾವತಿಸುವ ಸಂಬಂಧ ಸೂಕ್ತ ನಿರ್ದೇಶನ ನೀಡಿದ್ದರೂ ಕ್ರಮ ಕೈಗೊಂಡಿಲ್ಲವೆಂದು ದೂರಿದರು.

ಕೆಲ ವ್ಯಕ್ತಿಗಳು ಸಾಗುವಳಿ ಮಾಡುತ್ತಿರುವ ಭೂಮಿಯನ್ನು ಅಗೆದು ಮಣ್ಣನ್ನು ಚಿಕ್ಕಟ್ಟೆ ಕೆರೆಯ ಜಾಗದಲ್ಲಿ ಹಾಕಿ ಮುಚ್ಚುವ ಪ್ರಯತ್ನ ನೆಡಸುತ್ತಿದ್ದಾರೆ. ಈ ಅಕ್ರಮವನ್ನು ತಡೆದು ಲಕ್ಷ್ಮಿಸಾಗರ ರೈತರ ಭೂಮಿಯನ್ನು ಉಳಿಸಬೇಕು. ಕೃಷಿ ಚಟುವಟಿಕೆಗಳನ್ನು ನಡೆಸುತ್ತಿರುವ ಉಳಿಕೆ ಭೂಮಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಕಾನೂನು ರೀತಿ ಭೂಸ್ವಾಧೀನ ಪ್ರಕ್ರಿಯೆಯನ್ನು ನಡೆಸಿ ಇಂದಿನ ಮಾರುಕಟ್ಟೆ ದರದಲ್ಲಿ ಭೂ ಪರಿಹಾರ ನೀಡಬೇಕೆಂದು ಒತ್ತಾಯಿಸಿದರು.

ಕೆಪಿಆರ್‌ಎಸ್ ಜಿಲ್ಲಾ ಅಧ್ಯಕ್ಷ ಹೆಚ್.ಆರ್.ನವೀನ್ ಕುಮಾರ್, ಮೂರ್ತಿ, ಜಯಲಕ್ಷ್ಮಿ, ಲಕ್ಷ್ಮಿಸಾಗರ ಗ್ರಾಮಸ್ಥರು ಹಾಜರಿದ್ದರು.

## ಪ್ರತಿಭಟನೆಯೊಂದಿಗೆ ತಂಬಾಕು ಮಾರುಕಟ್ಟೆ ಆರಂಭ

» ಮೊದಲನೇ ಪುಟದಿಂದ

ತಂಬಾಕು 310 ರಿಂದ 311 ರೂ. ಕನಿಷ್ಟ ದರ 210 ರಿಂದ 272.58 ರೂ. ದೊರೆಯಿತು. ಈ ಹಿಂದೆ ಸರಾಸರಿ ದರ 284.98 ರೂ. ದೊರೆತಿತ್ತು. ಸರಾಸರಿ ದರದಲ್ಲಿಯೂ ಕೂಡ 12.4 ರೂ. ಬೆಲೆ ಕಡಿತಗೊಂಡಿತು.

**ಹರಾಜಿನಲ್ಲಿ 11 ಕಂಪನಿಗಳು ಭಾಗಿ:** ಹಲವು ದಿನಗಳ ನಂತರ ಮಾರುಕಟ್ಟೆ ಆರಂಭಗೊಂಡಿದ್ದು, ಎಂದಿನಂತೆ 25 ಕಂಪನಿಗಳು ತಂಬಾಕು ಖರೀದಿಯಲ್ಲಿ ಭಾಗಿಯಾಗಬೇಕಿತ್ತು. ಗುರು ವಾರ 11 ಕಂಪನಿಗಳು ಮಾತ್ರ ಭಾಗಿಯಾದವು. ಹರಾಜು ಮಾರುಕಟ್ಟೆ-7ರಲ್ಲಿ ಒಟ್ಟು 521 ಬೇಲ್‌ಗಳು ಬಂದಿದ್ದವು. ಅವುಗಳಲ್ಲಿ411 ಮಾರಾಟ ಆಗಿವೆ. ಗುಣಮಟ್ಟದ ಕೆ.ಜಿ. ತಂಬಾಕಿಗೆ 311ರೂ., ಕನಿಷ್ಠ 210 ರೂ. ಮತ್ತು ಸರಾಸರಿ 272.58 ರೂ. ದೊರೆತಿದೆ. ಮುಂದಿನ ಮಾರು ಕಟ್ಟೆಯಲ್ಲಿ ಉಳಿದ ಎಲ್ಲಾ ಕಂಪನಿಗಳು ಭಾಗಿಯಾ ಗುವ ನಿರೀಕ್ಷೆ ಇದೆ ಎಂದು ಹರಾಜು ಅಧೀಕ್ಷಕಿ ಸವಿತಾ ಅವರು ತಿಳಿಸಿದರು.

**ರೈತರಿಗೆ ಬೆಲೆ ಸ್ಥಿರತೆ ಸಿಕ್ಕಿಲ್ಲ**

ಈಗಿನ ಮಾರುಕಟ್ಟೆಯಲ್ಲಿನ ಬೆಲೆ ನೋಡಿದರೆ ಭಯವಾಗುತ್ತಿದೆ. ಇಲ್ಲಿ ಮಂಡಳಿ, ಕೇಂದ್ರ, ಸರ್ಕಾರ ನೆರವಿಗೆ ಬಂದಂತೆ ಕಾಣುತ್ತಿಲ್ಲ. ಅಬಕಾರಿ ಸುಂಕ, ಜಿಎಸ್‌ಟಿ ವಾಪಾಸ್ ಪಡೆದಿರುವ ಹೇಳಿಕೆಗಳು ಜಾರಿಗೆ ಬಂದಿಲ್ಲ. 45 ಸಾವಿರ ಕೋ.ರೂ. ರಫ್ತು ಸುಂಕವನ್ನು ತಂದುಕೊಡುವ ತಂಬಾಕು ಬೆಳೆಗಾರರಿಗೆ ಬೆಲೆ ಸಿಗುತ್ತಿಲ್ಲ. ಮುಕ್ತ ವ್ಯಾಪಾರ ಮಾಡಿದರೇ ಬೆಳೆಗಾರರಿಗೆ ಬರೆ ಎಂದಿಗೂ ಇರಲ್ಲ. ವರ್ತಕರನ್ನು ಉದ್ಧಾರ ಮಾಡಿ ರೈತರನ್ನು ಶೋಷಣೆಗೆ ತಳ್ಳುವ ಕೆಲಸ ಪ್ರತಿ ವರ್ಷವೂ ನಡೆಯುತ್ತಿದೆಯೆಂದು ರೈತ ಮುಖಂಡ ಸೀಬಳ್ಳಿ ಯೋಗಣ್ಣ ಅವರು ಆರೋಪಿಸಿದರು.

**ಆತಂಕ ಬೇಡ:** ತಂಬಾಕು ಬೆಳೆಯ ಮೇಲೆ ವಿಧಿಸಿದ್ದ ಶೇ.18ರಷ್ಟು ಅಬಕಾರಿ ಸುಂಕವನ್ನು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಪ್ರಯತ್ನದ ಫಲವಾಗಿ ರದ್ದುಗೊಂಡಿದೆ. ಬೆಳೆಗಾರರು ಆತಂಕ ಪಡುವ ಅಗತ್ಯವಿಲ್ಲವೆಂದು ಶಾಸಕ ಎ.ಮಂಜು ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳೆಗಾರರ ಹಿತ ಕಾಪಾಡುವಲ್ಲಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಪರಿಶ್ರಮ ವಹಿಸಿದ್ದಾರೆ. ತಂಬಾಕು ಮಾರುಕಟ್ಟೆ ಪುನರಾರಂಭವಾಗಿದ್ದು, ಬೆಳೆಗಾರರು ತಂಬಾಕು ಮಾರಾಟ ಮಾಡಬಹುದಾಗಿದೆ. ಕಂಪನಿಗಳು ಉತ್ತಮ ದರವನ್ನು ರೈತರಿಗೆ ನೀಡುವ ಮೂಲಕ ಹಿತ ಕಾಪಾಡಬೇಕೆಂದರು.

## ಜಿಲ್ಲಾ ಮಹಿಳಾ ಸರ್ಕಾರಿ ನೌಕರರ ಸಂಘ ಅಸ್ತಿತ್ವಕ್ಕೆ

• ಪ್ರಜೋದಯ ವರದಿ




**ಹಾಸನ:** ಮಹಿಳಾ ಸರ್ಕಾರಿ ನೌಕರರ ಸಮಸ್ಯೆ ನಿವಾರಣೆ, ಅವರ ಸಂಕಷ್ಟಗಳ ಸ್ಪಂದನೆ ಸದುದ್ದೇಶದಿಂದ ರಾಜ್ಯದಲ್ಲಿ ಸರ್ಕಾರಿ ಮಹಿಳಾ ನೌಕರರ ಸಂಘ ಅಸ್ತಿತ್ವಕ್ಕೆ ಬಂದಿದೆ. ಜಿಲ್ಲಾ ಸಂಘವನ್ನೂ ರಚಿಸಲಾಗಿದೆ ಎಂದು ರಾಜ್ಯ ಸಂಘದ ಪ್ರಧಾನ ಕಾರ್ಯದರ್ಶಿ ಶೈಲಜಾ ಅವರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಿಳಾ ಸಂಘವು ರಾಜ್ಯ ಸಂಘದ ಅಧ್ಯಕ್ಷರಾದ ಷಡಾಕ್ಷರಿ ಅವರ ಮಾರ್ಗದರ್ಶನದಲ್ಲಿ ಅದರ ಅಂಗಸಂಸ್ಥೆಯಾಗಿ ಕೆಲಸ ಮಾಡಲಿದೆ. ನಮ್ಮದೇ ಆದ ಕೆಲವು ಸಮಸ್ಯೆ ಇವೆ, ಅವುಗಳ ಬಗ್ಗೆ ವೇದಿಕೆಯಲ್ಲಿ ಚರ್ಚಿಸಿ ಸರ್ಕಾರದ ಗಮನಕ್ಕೆ ತರಲಾಗುವುದು. ಈಗಾಗಲೇ ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಹಿಳಾ ನೌಕರರ ಪರವಾಗಿ ಕೆಲಸ ಮಾಡುತ್ತಿದೆಂದು ಹೇಳಿದರು.

ಹಾಸನ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಕೆ.ವೀಣಾ, ಪ್ರಧಾನ ಕಾರ್ಯದರ್ಶಿಯಾಗಿ ಕೆ.ಜಿ.ಸಾವಿತ್ರಮ್ಮ, ಖಜಾಂಚಿಯಾಗಿ ಪುಷ್ಪ, ಹಿರಿಯ ಉಪಾಧ್ಯಕ್ಷರಾಗಿ ದಾಕ್ಷಾಯಿಣಿ, ಉಪಾಧ್ಯಕ್ಷರಾಗಿ ನಂದಿನಿ, ಬಿ.ಪಿ. ಸುಧಾಮಣಿ, ಮಧುಮತಿ, ಬಿ.ಎಂ. ಶೃತಿ ಮತ್ತು ಡಿ.ಸಿ.ಪುಷ್ಪ ಆಯ್ಕೆ ಆಗಿದ್ದಾರೆ. ಗೌರವಾಧ್ಯಕ್ಷರಾಗಿ ಹಿಮ್ಸ್‌ನ ಅರವಳಿಕೆ ತಜ್ಞರಾದ ಡಾ.ಅನುಪಮ ಅವರನ್ನು ಸಭೆ ನಡೆಸಿ ಸರ್ವಾನುಮತದಿಂದ ಆಯ್ಕೆ ಮಾಡಲಾಗಿದ್ದು, ಶೀಘ್ರ ಸಂಘ ಉದ್ಘಾಟನೆ ಆಗಲಿದೆ ಎಂದು ತಿಳಿಸಿದರು.

ಜಿಲ್ಲಾಧ್ಯಕ್ಷರಾದ ವೀಣಾ ಮಾತನಾಡಿ, ವಿವಿಧ ಇಲಾಖೆಯಲ್ಲಿ ಕೆಲಸ ಮಾಡುವ ನೌಕರರಿಗೂ ಸಂಘ ರಚಿಸಿಕೊಳ್ಳುವ ಅವಕಾಶ ಇದೆ. ಹಾಗೆಯೇ ಮಹಿಳಾ ಶೋಷಣೆ, ಶೌಚಾಲಯ ಇತ್ಯಾದಿ ಸಮಸ್ಯೆ, ವಿಶ್ರಾಂತಿ ಕೊಠಡಿ ಇತ್ಯಾದಿ ಸಮಸ್ಯೆಗಳ ಬಗ್ಗೆ ರಾಜ್ಯ ಸಂಘದ ಗಮನಕ್ಕೆ ತಂದು ಬಗೆ ಹರಿಸಿಕೊಳ್ಳಲು ಜಿಲ್ಲಾ ಸಂಘ ಹುಟ್ಟು ಹಾಕಲಾಗಿದೆ ಎಂದು ಸ್ಪಷ್ಟನೆ ನೀಡಿದರು.

ಸಂಘದ ಪದಾಧಿಕಾರಿಗಳಾದ ರಮಾ, ರಾಜೇಶ್ವರಿ, ಮಂಗಳಾ, ಇಂದ್ರಮ್ಮ ಇದ್ದರು.



## ಸಿದ್ದಗಂಗಮ್ಮ ನಿಧನ

• ಪ್ರಜೋದಯ ವರದಿ

**ಅರಸೀಕೆರೆ:** ತಾಲ್ಲೂಕಿನ ಮಾಡಾಳು ಗ್ರಾಮದ ಎಂ.ಎನ್.ಓಂಕಾರಪ್ಪ ಅವರ ಪತ್ನಿ ಸಿದ್ದಗಂಗಮ್ಮ (69) ಹೃದಯಾಘಾತದಿಂದ ಬುಧವಾರ ರಾತ್ರಿ ನಿಧನ ರಾದರು. ಪತಿ, ಇಬ್ಬರು ಪುತ್ರಿಯರು ಹಾಗು ಬಂಧು ಮಿತ್ರರನ್ನು ಅಗಲಿದ್ದಾರೆ. ಗುರುವಾರ ಕಡಲ ಮಗೆಯಲ್ಲಿ ಅಂತ್ಯಕ್ರಿಯೆ ನೆರವೇರಿತು.

## 12 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು

• ಪ್ರಜೋದಯ ವರದಿ

**ಹೊಳೆನರಸೀಪುರ:** ಮನೆಯಲ್ಲಿ ಅಪಾರ ಪ್ರಮಾಣದ ಚಿನ್ನಾಭರಣ ಇರುವುದನ್ನು ಖಚಿತ ಪಡಿಸಿಕೊಂಡು ಯಾರೂಇಲ್ಲದಾಗ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು ನಗದು ಸೇರಿ 12 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ತಾಲ್ಲೂಕಿನ ಗುಳ್ಳದಪುರ ಗ್ರಾಮದಲ್ಲಿ ನಡೆದಿದೆ.

ಕಾಂತರಾಜು ಎಂಬುವವರ ಮನೆಯಲ್ಲಿ ಫೆ.3ರ ರಾತ್ರಿ ಕಳ್ಳತನ ನಡೆ ದಿದೆ. ಅಂದು ಬೆಳಿಗ್ಗೆ ಮನೆಗೆ ಬೀಗ ಹಾಕಿ ಜಮೀನಿಗೆ ತೆರಳಿದ್ದ ಅವರು ಸಂಜೆ 6.30ಕ್ಕೆ ವಾಪಾಸ್ಸಾಗಿ ನಂತರ ಕಾರ್ಯ ನಿಮಿತ್ತ ಹೊಳೆನರಸೀಪುರಕ್ಕೆ ತೆರಳಿದ್ದರು. ಮಾರನೇ ದಿನ ಮನೆಗೆ ಬಂದಾಗ ಬಾಗಿಲು ಮುರಿದಿರುವುದು ಗೊತ್ತಾಗಿದೆ. ಬೀರುವಿನಲ್ಲಿಟ್ಟಿದ್ದ 42 ಗ್ರಾಂ ತೂಕದ ಚಿನ್ನದ ಲಾಂಗ್ ಸರ, 7 ಗ್ರಾಂ ತೂಕದ ಚಿನ್ನದ ಉಂಗುರ, 5 ಗ್ರಾಂ ತೂಕದ ಚಿನ್ನದ ಉಂಗುರ, 6 ಗ್ರಾಂ ತೂಕದ ಒಂದು ಜೊತೆ ಮುತ್ತಿನ ಓಲೆ, 4 ಗ್ರಾಂ ತೂಕದ ಒಂದು ಜೊತೆ ಮಾಟಿ, 20 ಗ್ರಾಂ ತೂಕದ ಒಂದು ಚಿನ್ನದ ಗುಂಡಿನ ಸರ ಸೇರಿ 99 ಗ್ರಾಂ ತೂಕದ ಚಿನ್ನದ ಸರ ಹಾಗು 1.05 ಲಕ್ಷ ರೂ. ನಗದು ದೋಚಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪಿಟಿಸಿಎಲ್ ಕಾಯ್ದೆ ತಿದ್ದುಪಡಿಗೆ ಆಗ್ರಹಿಸಿ ಪ್ರತಿಭಟನೆ

• ಪ್ರಜೋದಯ ವರದಿ



**ಹಾಸನ:** ಪಿಟಿಸಿಎಲ್ ಕಾಯ್ದೆ ಸೆಕ್ಷನ್ 3(1)(ಬಿ)ಗೆ ತಿದ್ದುಪಡಿ ತರಬೇಕೆಂದು ದಲಿತ ಸಂಘಟನೆಗಳ ಸಮನ್ವಯ ಸಮಿತಿಯಿಂದ ಗುರುವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಕಾಯ್ದೆಯಲ್ಲಿನ 'ಗ್ರ್ಯಾಂಟೆಡ್'' ಎಂಬ ಪದಪ್ರಯೋಗವೇ ನ್ಯಾಯಾಲಯಗಳಲ್ಲಿ ಗೊಂದಲ ಹಾಗು ವ್ಯಾಖ್ಯಾನ ಸಮಸ್ಯೆಗೆ ಕಾರಣವಾಗುತ್ತಿದೆ. ಭೂ ಸುಧಾರಣಾ ಕಾಯ್ದೆ 1961 ಹಾಗು ವಿವಿಧ ಇನಾಂ ರದ್ದಿಯಾತಿ ಕಾಯ್ದೆಗಳು (1954, 1955, 1977) ಅಡಿಯಲ್ಲಿ ಹಕ್ಕು ಪಡೆದ ಎಸ್‌ಸಿ/ಎಸ್‌ಟಿ ಗೇಣಿದಾರರನ್ನು ಅರ್ಹರೆಂದು ಘೋಷಿಸಲಾಗಿದೆ. ಆದರೆ, ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್ ನೀಡಿರುವ ಹಲವು ತೀರ್ಪುಗಳಲ್ಲಿ ಇಂತಹ ಗೇಣಿದಾರರು ಪಿಟಿಸಿಎಲ್ ಕಾಯ್ದೆಗೆ ಅರ್ಹರಲ್ಲ ಎಂದು ಹೇಳಿವೆ.

ಹೈಕೋರ್ಟ್ ಪೂರ್ಣಪೀಠ ಮಹಮ್ಮದ್ ಜಾಫರ್ ವಿರುದ್ಧ ಕರ್ನಾಟಕ ಸರ್ಕಾರ, ಜಯಮ್ಮ ವಿರುದ್ಧ ಕೆಂಚಪ್ಪ, ಜಗದೀಶ್ ವಿರುದ್ಧ ಜಿ. ಎನ್.ರಾಮಚಂದ್ರ ಸೇರಿ ಹಲವು ಪ್ರಮುಖ ತೀರ್ಪು ಗಳನ್ನು ಮನವಿಯಲ್ಲಿ ಉಲ್ಲೇಖಿಸಲಾಗಿದ್ದು, ನ್ಯಾಯಾಲಯ ಈ ರೀತಿಯ ತೀರ್ಪು ನೀಡಲು ಕಾರಣವಾಗಿದೆಯೆಂದು ಪ್ರತಿಭಟನಾಕಾರರು ಹೇಳಿದರು.

ಆದ್ದರಿಂದ ಗ್ರ್ಯಾಂಟೆಡ್ ಬದಲು ಸರ್ಟೈನ್ ಲ್ಯಾಂಡ್ ಎಂಬ ಪದವನ್ನು ಬಳಸಿ ತಿದ್ದುಪಡಿ ಮಾಡಬೇಕು. ಹೀಗೆ ಮಾಡಿದರೆ ಮಾತ್ರ ಹಲವು ವರ್ಷಗಳಿಂದ ತೊಂದರೆ ಅನುಭವಿಸುತ್ತಿರುವ ದಲಿತರಿಗೆ ನ್ಯಾಯ ದೊರೆಯುತ್ತದೆಂದರು.

ಈ ಸಂದರ್ಭದಲ್ಲಿ ದಲಿತ ಸಂಘಟನೆಗಳ ಸಮನ್ವಯ ಸಮಿತಿ ಜಿಲ್ಲಾಧ್ಯಕ್ಷ ಕೃಷ್ಣದಾಸ್, ಈರೇಶ್ ಹಿರೇಹಳ್ಳಿ, ಎಂ.ವಿ.ಗೋವಿಂದರಾಜು, ರಂಗಸ್ವಾಮಿ, ಪುಟ್ಟರಾಜಪ್ಪ ಮತ್ತಿತರರಿದ್ದರು.

## ಇಂದು ದೇವಿ ಪುರಾಣ ಪಠಣ, ಧರ್ಮಸಭೆ

• ಪ್ರಜೋದಯ ವರದಿ




**ಹಾಸನ:** ಲೋಕ ಕಲ್ಯಾಣಕ್ಕಾಗಿ ಶುಕ್ರವಾರ ನಗರದ ಹಾಸನಾಂಬ ದೇವಾಲಯ ಆವರಣದಲ್ಲಿ ಸಾಮೂಹಿಕ 108ಕ್ಕೂ ಹೆಚ್ಚು ಜನರು ಶ್ರೀದೇವಿ ಪುರಾಣ ಪಠಣ, ಹೋಮ ಮತ್ತು ಧರ್ಮಸಭೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ರಾಯಚೂರಿನ ಉಮಳಿ ಹೊಸುರು ಹಿರೇಮಠದ ಕಿಡಿಗಣ್ಣಯ್ಯ ಸ್ವಾಮಿ ಅವರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಸಹಯೋಗದೊಂದಿಗೆ ಈ ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾಜ್ಯದ ವಿವಿಧೆಡೆಗಳಿಂದ ಆಗಮಿಸುತ್ತಿರುವ 108ಕ್ಕೂ ಹೆಚ್ಚು ಮಂದಿ ದೇವಿ ಉಪಾಸಕರು ಸಾಮೂಹಿಕವಾಗಿ ದೇವಿಪುರಾಣ ಪಠಣ ಹಾಗು ಹೋಮದಲ್ಲಿ ಭಾಗವಹಿಸುವರು ಎಂದರು.

ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಸಾನಿಧ್ಯ ವಹಿಸುವರು. ಕಾಲಜ್ಞಾನ ಬ್ರಹ್ಮ ಸದ್ಗುರು ವಿಶ್ವಕಾಲಜ್ಞಾನ ಶಿವಯೋಗಿ, ಡಾ.ಶ್ರೀ ಶರಣಬಸವ ಸ್ವಾಮೀಜಿ, ಶ್ರೀ ಸೋಮನಾಥ ಶಿವಾಚಾರ್ಯ ಸ್ವಾಮೀಜಿ, ಶ್ರೀ ನಂದೀಶ್ವರ ಶಿವಾಚಾರ್ಯ ಸ್ವಾಮೀಜಿ, ಶ್ರೀ ವಿಜಯಕುಮಾರ ಸ್ವಾಮೀಜಿ, ಶ್ರೀ ಸಂಗಮೇಶ್ವರ ಸ್ವಾಮೀಜಿ ಸೇರಿ ಅನೇಕ ಮಠಾಧೀಶರು, ಹಾಸನಾಂಬ ದೇವಾಲಯದ ಪ್ರಧಾನ ಅರ್ಚಕ ನಾಗರಾಜು ಮೊದಲಾದವರು ಭಾಗಿಯಾಗುವರು ಎಂದರು.

ಸಣ್ಣ ನೀರಾವರಿ ಹಾಗೂ ವಿಜ್ಞಾನ-ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಕಾರ್ಯಕ್ರಮ ಉದ್ಘಾಟಿಸುವರು. ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಪಿ. ಸ್ವರೂಪ್, ಉಪವಿಭಾಗಾಧಿಕಾರಿ ಜಗದೀಶ ಗಂಗಣ್ಣನವರ್, ಕಂಚಮಾರನಹಳ್ಳಿ ಕಾಂತಣ್ಣ, ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಅಧ್ಯಕ್ಷ ಕಟ್ಟಾಯ ಶಿವಕುಮಾರ, ಬಿಜೆಪಿ ಮುಖಂಡ ಪುನೀತ್ ಗೌಡ, ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ಬಾ.ನಂ.ಲೋಕೇಶ್ ಪಾಲ್ಗೊಳ್ಳಲಿದ್ದಾರೆಂದು ತಿಳಿಸಿದರು.

# ಒತ್ತುವರಿ ತೆರವುಗೊಳಿಸಿ ನಿವೇಶನ ಹಂಚಿಕೆಗೆ ಆಗ್ರಹ

• ಪ್ರಜೋದಯ ವರದಿ



**ಹಾಸನ:** ಸಕಲೇಶಪುರ ತಾಲ್ಲೂಕಿನ ಮಲ್ಲಿಕಾರ್ಜುನ ನಗರ, ಪ್ರೇಮನಗರದಲ್ಲಿರುವ ಸರ್ಕಾರಿ ಭೂಮಿಯನ್ನು ಪ್ರಭಾವಿಗಳು ಒತ್ತುವರಿ ಮಾಡಿಕೊಂಡಿರುವುದನ್ನು ತೆರವುಗೊಳಿಸಿ ನಿವೇಶನ ರಹಿತರಿಗೆ ನೀಡಬೇಕೆಂದು ಒತ್ತಾಯಿಸಿ ಜಿಲ್ಲಾ ಆದಿ ದ್ರಾವಿಡ ತುಳು ಸಮಾಜ ಸೇವಾ ಸಂಘದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಮಲ್ಲಿಕಾರ್ಜುನ ನಗರ, ಪ್ರೇಮನಗರದ ಸರ್ವೆ ನಂ.134ರಲ್ಲಿ ಇರುವ 3.13 ಎಕರೆ ಸರ್ಕಾರಿ ಖರಾಬು ಭೂಮಿಯನ್ನು ಒತ್ತುವರಿ ಮಾಡಿಕೊಳ್ಳಲಾಗಿದೆ. ಅದೇ ರೀತಿ ಸರ್ವೆ ನಂ.128ರಲ್ಲಿ 1.27 ಎಕರೆ ಭೂಮಿಯನ್ನೂ ಕಬಳಿಕೆ ಮಾಡಲಾಗಿದೆ. ಈ ಭೂಒತ್ತುವರಿಯನ್ನು ತೆರವುಗೊಳಿಸಿ ನಿವೇಶನ ರಹಿತರಿಗೆ ನೀಡುವಂತೆ ಮನವಿ ಮಾಡಿದರೂ ಯಾವುದೇ ಕ್ರಮ ತೆಗೆದುಕೊಂಡಿಲ್ಲ. ಈ ಸಂಬಂಧ ಜಿಲ್ಲಾಡಳಿತ ಕ್ರಮ ಕೈಗೊಂಡು ಒತ್ತುವರಿಗೆ ತೆರವುಗೊಳಿಸಿ ನಿವೇಶನ ರಹಿತ ಆದಿದ್ರಾವಿಡ ಜನಾಂಗದ ಕುಟುಂಬಗಳಿಗೆ ಹಂಚಿಕೆ ಮಾಡಬೇಕೆಂದು ಒತ್ತಾಯಿಸಿದರು.

ಸಕಲೇಶಪುರ ತಾಲ್ಲೂಕಿನ ಹೆಬ್ಬಸಾಲೆ ಗ್ರಾಮದ ಸರ್ವೆ ನ.241ರಲ್ಲಿ ಆದಿದ್ರಾವಿಡ ಸಮುದಾಯದ 22 ಕುಟುಂಬಗಳು ಗುಡಿಸಲು ಹಾಕಿಕೊಂಡು ಹಲವು ವರ್ಷಗಳಿಂದ ವಾಸವಾಗಿದ್ದಾವೆ. ಇಲ್ಲಿ ಯಾವುದೇ ರೀತಿಯ ಮೂಲ ಭೂತ ಸೌಲಭ್ಯಗಳಿಲ್ಲ. ಕುಡಿಯುವ ನೀರು, ವಿದ್ಯುತ್ ಸೌಕರ್ಯ ಇಲ್ಲದೆ ಬಡ ಕುಟುಂಬಗಳು ವಾಸ ಮಾಡುವುದೇ ಸಮಸ್ಯೆಯಾಗಿದೆ. ಈ ಬಗ್ಗೆ ತಹಶೀಲ್ದಾರ್, ಉಪವಿಭಾಗಾಧಿಕಾರಿ, ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲವೆಂದು ದೂರಿದರು.

ಈ ಬಡ ಕುಟುಂಬಗಳಿಗೆ ಮೂಲಭೂತ ಸೌಲಭ್ಯವನ್ನು ಒದಗಿಸಲು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಕಂದಾಯ ಗ್ರಾಮವನ್ನಾಗಿ ಮಾಡಬೇಕಾಗಿ ಒತ್ತಾಯಿಸಿ ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಅವರಿಗೆ ಮನವಿ ಸಲ್ಲಿಸಿದರು.

## 55 ಸಾವಿರ ರೂ. ನಗದು, ಬೈಕ್ ಕಳವು

• ಪ್ರಜೋದಯ ವರದಿ

**ಹಾಸನ:** ಮನೆಯಲ್ಲಿ ಯಾರೂ ಇಲ್ಲದಿರುವುದರಿಂದ ಸೂಕ್ತ ಸಮಯ ನೋಡಿಕೊಂಡು ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು 55 ಸಾವಿರ ರೂ. ನಗದು ಹಾಗು ಮನೆ ಮುಂದೆ ನಿಲ್ಲಿಸಿದ್ದ ಬೈಕ್ ಕಳವು ಮಾಡಿರುವ ಘಟನೆ ಬಿ.ಕಾಟೀಹಳ್ಳಿಯಲ್ಲಿ ಇತ್ತೀಚೆಗೆ ನಡೆದಿದೆ.

ನಟರಾಜ ಅವರು ಶಾಂತಿಗ್ರಾಮ ಹೋಬಳಿ ಬಿ.ಹೊಸಹಳ್ಳಿಯಲ್ಲಿ ತಮ್ಮನ ಗೃಹ ಪ್ರವೇಶ ಸಮಾರಂಭ ನಿಮಿತ್ತ ಜ.29ರಂದು ಮನೆಗೆ ಬೀಗ ಹಾಕಿ ಕುಟುಂಬ ಸಮೇತ ತೆರಳಿದ್ದರು. ಮಾರನೇ ದಿನ ಬಂದು ನೋಡಿದಾಗ ಕಬ್ಬಿಣದ ಬಾಗಿಲು ಮುರಿದು ಬೀರುವಿನಲ್ಲಿಟ್ಟಿದ್ದ 40 ಸಾವಿರ ರೂ. ಹಾಗು ಗೋಲಕದಲ್ಲಿ ಕೂಡಿಟ್ಟಿದ್ದ 15 ಸಾವಿರ ರೂ. ಕದ್ದಿದ್ದಾರೆ. ಮನೆಯ ಮುಂಭಾಗದ ಗೇಟ್ ಹತ್ತಿರ ನಿಲ್ಲಿಸಿದ್ದ ಬಜಾಜ್ ಸಿಟಿ 100 ಬೈಕ್ ಅನ್ನು ಕಳವು ಮಾಡಲಾಗಿದೆ.

ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗಾಂಜಾ ಸೇವಿಸಿದ್ದ ಮೂವರ ಬಂಧನ

• ಪ್ರಜೋದಯ ವರದಿ

**ಹಾಸನ:** ಮಾದಕ ಪದಾರ್ಥ ಗಾಂಜಾ ಸೇವಿಸಿ ರಸ್ತೆಯಲ್ಲಿ ಅನುಮಾನಾಸ್ಪದವಾಗಿ ಓಡಾಡಿ ಕೊಂಡಿದ್ದ ಮೂವರನ್ನು ಪೊಲೀಸರು ಬಂಧಿಸಿದ್ದಾರೆ.

ವಲ್ಲಬಾಯಿ ರಸ್ತೆಯ ಅಫ್ತಾಭ್, ಸಲೀಂ ನಗರದ ಅತೀಕ್ ಪಾಷಾ, ಅರಸೀಕೆರೆಯ ಸೂಫಿಯಾನ್ ಪಾಷ ಬಂಧಿತ ಯುವಕರು. ವೆಲ್ಡಿಂಗ್ ಹಾಗು ಎಲೆಕ್ಟ್ರಿಷಿಯನ್ ಕೆಲಸ ಮಾಡಿಕೊಂಡಿರುವ ಯುವಕರು ಗಾಂಜಾ ವ್ಯಸನಿಗಳಾಗಿದ್ದಾರೆ.

ಫೆ.4ರ ಬೆಳಿಗ್ಗೆ 5ರ ಸಮಯದಲ್ಲಿ ಅಮೀರ್ ಮೊಹಲ್ಲಾ ಮಸೀದಿ ಹತ್ತಿರ ಪೊಲೀಸರು ಗಸ್ತು ತಿರುಗುತ್ತಿದ್ದಾಗ ಅನುಮಾನಗೊಂಡು ಮೂವರನ್ನು ವಿಚಾರಿಸಿದಾಗ ಗಾಂಜಾ ಸೇವಿಸಿರುವ ಕುರಿತು ಸಂಶಯ ಬಂದಿದೆ. ನಂತರ ಎಲ್ಲರನ್ನೂ ಹಿಮ್ಸ್‌ನಲ್ಲಿ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದಾಗ ದೃಢಪಟ್ಟಿದೆ. ಪೆನ್ಷನ್ ಮೊಹಲ್ಲಾ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK